ವಿಜಯಪುರ | ಸಂಪುಟ 02 | ಸಂಚಿಕೆ 224 | ಪುಟ 4 | ₹ 3.00
https://udayarashminews.com
udayarashmi 90088 88340

# ಉದಯ ರಶ್ಮಿ

Udayarashmi Kannada Daily
ಜನಪರ-ಜೀವಪರ
ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ
Editor: Indushekhar Manur

editor.udayarashmi@gmail.com | RNI NO: KARKAN/2023/86203 | ಮಂಗಳವಾರ, ಅಕ್ಟೋಬರ್ 28, 2024



"ವಿಜಯಪುರಕ್ಕೂ ನನಗೂ ಭಾವನಾತ್ಮಕ ಸಂಬಂಧವಿದೆ. ಈ ಹಿನ್ನಲೆಯಲ್ಲಿ ವಿಜಯಪುರ ಜಿಲ್ಲೆಯನ್ನು ನೋಡಲ್ ಜಿಲ್ಲೆಯಾಗಿ ಆಯ್ಕೆ ಮಾಡಿ ಅಭಿವೃದ್ಧಿ ಪಡಿಸಲಾಗುತ್ತಿದೆ. ಮಹಿಳಾ ಸಬಲೀಕರಣಕ್ಕೆ ಒತ್ತು ನೀಡುವೆ. ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಎಲ್ಲರೂ ಕೈ ಜೋಡಿಸಬೇಕು."

■ ಡಾ. ಸುಧಾಮೂರ್ತಿ
ರಾಜ್ಯಸಭಾ ಸಂಸದೆ

## ಪ್ರತಿ ಸಮಾಜದ ಅಭಿವೃದ್ಧಿಗೂ ಬದ್ಧ : ಶಾಸಕ ಯತ್ನಾಳ



■ ಉದಯರಶ್ಮಿ ದಿನಪತ್ರಿಕೆ

### ಮರಾಠಾ ಸಮಾಜ ಸಾಂಸ್ಕೃತಿಕ ಸೇವಾ ಸಮಿತಿಯ ನೂತನ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ

ವಿಜಯಪುರ: ನಾವೆಲ್ಲರೂ ಇಲ್ಲಿ ಒಗ್ಗಟ್ಟಿನಿಂದ ಇರುವ ಕಾರಣಕ್ಕೆ ವಿಜಯಪುರ ನಗರ ನಿರೀಕ್ಷೆಗೂ ಮೀರಿ ಅಭಿವೃದ್ಧಿ ಕಾಣಲು ಸಾಧ್ಯವಾಗಿದೆ ಎಂದು ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಹೇಳಿದರು.

ನಗರದ ವಾರ್ಡ ನಂ.15 ರಲ್ಲಿ ಬರುವ ಟ್ರೇಜರಿ ಕಾಲೊನಿಯ ಅಯ್ಯಪ್ಪ ದೇವಸ್ಥಾನ ಹತ್ತಿರ ಭಾನುವಾರ 2020-21ನೇ ಸಾಲಿನ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ ಮಂಜೂರಿಸಲಾದ ರೂ.10 ಲಕ್ಷ ಅನುದಾನದಲ್ಲಿ ಮರಾಠಾ ಸಮಾಜ ಸಾಂಸ್ಕೃತಿಕ ಸೇವಾ ಸಮಿತಿಯ ನೂತನ ಸಮುದಾಯ ಭವನ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಕಳೆದ ವಿಧಾನಸಭಾ ಚುನಾವಣೆಯಲ್ಲಿ ಸಾಕಷ್ಟು ಅಪಪ್ರಚಾರ ನಡೆಸಿದರೂ ಯಾರ ಆಟವು ನಡೆಯಲಿಲ್ಲ. ಹಿಂದಿನ ಚುನಾವಣೆಗಿಂತಲೂ ಹೆಚ್ಚು ಮತಗಳಿಂದ ಗೆಲುವು ಸಾಧಿಸಿದೆ. ಅದರ ಫಲವಾಗಿ ಎಂದೂ ಅಭಿವೃದ್ಧಿ ಕಾಣದ ಬಡಾವಣೆ, ಕಾಲನಿಗಳು ಸೇರಿ ನಗರದ ಒಳ ರಸ್ತೆಗಳು ಹಾಗೂ ಪ್ರಮುಖ ರಸ್ತೆಗಳು ಅಭಿವೃದ್ಧಿಗೊಂಡಿವೆ. ಇದರಿಂದ ನಮ್ಮ ನಗರ ದೂಳು ಮುಕ್ತವಾಗಿ, ಅಂದ ಹೆಚ್ಚಾಗುವ ಜೊತೆಗೆ ನಿವೇಶನಗಳ ಮೌಲ್ಯ ಸಹ ದ್ವಿಗುಣಗೊಂಡಿವೆ. ನಗರದ ಸಾರ್ವಜನಿಕರು ಸಮಸ್ಯೆಗಳಿಲ್ಲದೆ ಖುಷಿಯಿಂದ ಇದ್ದರೆ ಸಾಕು. ಪ್ರತಿಯೊಂದು ಸಮಾಜದ ಅಭಿವೃದ್ಧಿಗೂ ಪ್ರಾಮಾಣಿಕವಾಗಿ ಅನುಕೂಲ ಮಾಡಿಕೊಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಮರಾಠಾ ಸಮಾಜ ಸಾಂಸ್ಕೃತಿಕ ಸೇವಾ ಸಮಿತಿ, ಸಮುದಾಯ ಭವನ ಆಡಳಿತ ಮಂಡಳಿ ಅಧ್ಯಕ್ಷ ವಿಜಯಕುಮಾರ ಚವ್ಹಾಣ, ಕಾರ್ಯದರ್ಶಿ ರಾಹುಲ್ ಜಾಧವ, ಸಹ ಕಾರ್ಯದರ್ಶಿ ಶಂಕರ ಕನಸೆ, ಖಜಾಂಚಿ ರಾಜು ಮೋರೆ, ಸದಸ್ಯರಾದ ವಸಂತ ಬುರ್ಕೆ, ಸಿದ್ದೋಬಾ ಚವ್ಹಾಣ, ಉಮೇಶ ಚವ್ಹಾಣ, ಬಾಳಕೃಷ್ಣ ಪವಾರ ಸೇರಿದಂತೆ ಸಮಾಜ ಬಾಂಧವರು ಭಾಗವಹಿಸಿದ್ದರು.

### ಹೊನವಾಡದಲ್ಲಿ ವಕ್ಫ್ ಆಸ್ತಿ ಬರೀ 11 ಎಕರೆ | ಅನವಶ್ಯಕ ಗೊಂದಲ ಸೃಷ್ಟಿ | ಆತಂಕ ಬೇಡವೆಂದ ಸಚಿವ ಎಂ.ಬಿ.ಪಾಟೀಲ

## ವಕ್ಫ್ ಆಸ್ತಿ ಪರಿಶೀಲನೆಗೆ ಟಾಸ್ಕ್ ಫೋರ್ಸ್ ಸಮಿತಿ ರಚನೆ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲೆಯಲ್ಲಿ ವಕ್ಫ್ ಆಸ್ತಿ ಕುರಿತಂತೆ ಕೆಲ ಜನಪ್ರತಿನಿಧಿಗಳು ಅನವಶ್ಯಕವಾಗಿ ಗೊಂದಲ ಸೃಷ್ಟಿ ಮಾಡಿ, ಚರ್ಚೆ ಹುಟ್ಟುಹಾಕಿದ್ದು ಇದಕ್ಕೆಲ್ಲ ಇತಿಶ್ರೀ ಹಾಡಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಟಾಸ್ಕ್ ಫೋರ್ಸ್ ಸಮಿತಿ ರಚಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ.ಪಾಟೀಲ ಹೇಳಿದರು.

ರವಿವಾರ ನಗರದಲ್ಲಿ ಮಾಧ್ಯಮ ಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಟಾಸ್ಕ್‌ಫೋರ್ಸ್ ಸಮಿತಿಯಲ್ಲಿ ಜಿಲ್ಲಾಧಿಕಾರಿಗಳೊಂದಿಗೆ ಉಪವಿಭಾಗಾಧಿಕಾರಿಗಳು ಮತ್ತು ತಹಸಿಲ್ದಾರರು ಇರಲಿದ್ದು, ಈ ಸಮಿತಿಯು 1964 ರಿಂದ 1974 ರವರೆಗಿನ ಜಿಲ್ಲೆಯ ಎಲ್ಲ ವಕ್ಫ್ ಆಸ್ತಿಗಳ ಭೂದಾಖಲೆಗಳನ್ನು ಪರಿಶೀಲನೆ ಮಾಡಲಿದೆ ಎಂದು ತಿಳಿಸಿದರು.

ಜಿಲ್ಲೆಯಲ್ಲಿ ವಕ್ಫ್ 14201 ಎಕರೆ ಆಸ್ತಿ ಹೊಂದಿತ್ತು. ಅದರಲ್ಲಿ 11835 ಎಕರೆ ಆಸ್ತಿಯನ್ನು ಸರಕಾರ ಈಗಾಗಲೆ ಹಂಚಿಕೆ ಮಾಡಿದೆ. 1459 ಎಕರೆ ಇಂದೀಕರಣ ಮಾಡಬೇಕಿದೆ. ಈಗ ವಕ್ಫ್ ಹೆಸರಿನಲ್ಲಿರುವುದು 773 ಎಕರೆ ಆಸ್ತಿ ಮಾತ್ರ. ಹಂಚಿಕೆ ಮಾಡಲಾದ 12083 ಎಕರೆ ಭೂಮಿಯೆಲ್ಲವೂ ಬಹುತೇಕ ಮುಸ್ಲಿಂ ಆಸ್ತಿಗಳಾಗಿದ್ದು ಅದರಲ್ಲಿ ಶೇ.25-30 ರಷ್ಟು ಆಸ್ತಿಗಳನ್ನು ಅವರು ಹಿಂದುಗಳಿಗೆ ಮಾರಾಟ ಮಾಡಿದ್ದು ಇರುತ್ತದೆ. ಆದರೆ ರಾಜಕೀಯ ಲಾಭಕ್ಕೋಸ್ಕರ ಕೆಲವರು ಇದನ್ನು ಹಿಂದುಗಳ ಆಸ್ತಿ ಎಂದು ಸುಳ್ಳು ಪ್ರಚಾರ ಮಾಡುತ್ತಿರುವುದು ಸರಿಯಲ್ಲ ಎಂದು ಸಚಿವರು ಆಕ್ರೋಶ ವ್ಯಕ್ತಪಡಿಸಿದರು.

ಕಳೆದ ಒಂದು ತಿಂಗಳಲ್ಲಿ ಜಿಲ್ಲೆಯಲ್ಲಿ ವಕ್ಫ್ ಆಸ್ತಿಗೆ ಸಂಬಂಧಿಸಿದಂತೆ ಅದಿಕಾರಿಗಳು ಒಟ್ಟು 124 ನೋಟಿಸ್ ಗಳನ್ನು ಮಾತ್ರ ಜಾರಿ ಮಾಡಿದ್ದಾರೆ. ಆದರೆ ಇಂಡಿಂ-ಬುಲ್ಲಿ 44 ಆಸ್ತಿಗಳಿಗೆ ಸಂಬಂಧಿಸಿದಂತೆ ಅಲ್ಲಿಯ ತಹಸಿಲ್ದಾರ ಅವರು ನೋಟಿಸ್ ಕೊಡದೇ ಇಂದೀಕರಣ ಮಾಡಿದ್ದು, ಅದನ್ನು ಉಪವಿಭಾಗಾಧಿಕಾರಿಗಳು ತಮ್ಮ ಪರಮಾಧಿಕಾರ ಬಳಸಿಕೊಂಡು ಸೂಕ್ತ ನಿರ್ಣಯ ಕೈಗೊಳ್ಳಲಿದ್ದಾರೆ ಎಂದರು.

ಇನ್ನು ಸಿಂದಗಿ ತಾಲೂಕಿನ ಯರಗಲ್ ಗ್ರಾಮದ ಸ.ನಂ 138 ರ 13 ಎಕರೆ ಆಸ್ತಿ 1974 ಗೆಜೆಟ್ ನೊಟಿಫಿಕೇಶನ್ ಗಿಂತ ಮೊದಲು 1930 ಕ್ಕೂ ಮೊದಲಿನ ಪ್ರಕರಣವಾಗಿದ್ದು ಇದು ರೈತರ ಖಾಸಗಿ ಆಸ್ತಿಯಾಗಿದ್ದು ಇದನ್ನು ಕೈಬಿಡಲಾಗಿದೆ. ಅಲ್ಲದೇ ಸಿಂದಗಿಯ ವಿರಕ್ತಮಠದ ಆಸ್ತಿ (1.36 ಎಕರೆ) ಸ.ನಂ 1029 ಇದ್ದದ್ದು ತಪ್ಪಾಗಿ 1020 (ವಕ್ಫ್ ಆಸ್ತಿ) ಎಂದು ನಮೂದಾಗಿದ್ದು ಅದನ್ನೂ ಸಹ ಸರಿಪಡಿಸಲಾಗುತ್ತಿದೆ ಎಂದು ತಿಳಿಸಿದರು.

ಜಿಲ್ಲಾಧಿಕಾರಿ ಟಿ.ಭೂಬಾಲನ್, ಮಹಾನಗರ ಪಾಲಕೆ ಆಯುಕ್ತ ವಿಜಯಕುಮಾರ ಮೆಕ್ಕಳಕಿ, ಇಂಡಿ ಉಪವಿಭಾಗಾಧಿಕಾರಿ ಅಬಿದ್ ಗದ್ಯಾಳ, ಸಚಿವರ ಸಾರ್ವಜನಿಕ ಸಂಪರ್ಕಾಧಿಕಾರಿ ಮಹಾಂತೇಶ ಬಿರಾದಾರ, ಜಿಲ್ಲಾ ವಕ್ಫ್ ಬೋರ್ಡ್ ಅಧಿಕಾರಿ ಮತ್ತು ತಹಸಿಲ್ದಾರರು ಇದ್ದರು.

### ಹೊನವಾಡ ಸಮಸ್ಯೆ ಇತ್ಯರ್ಥ

**ಗೆಜೆಟ್‌ನಲ್ಲಿ ತಪ್ಪಾಗಿ ನಮೂದಿಸಿದ್ದರಿಂದಾಗಿ ಜಿಲ್ಲೆಯ ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದ 1,200 ಎಕರೆ ವಕ್ಫ್ ಆಸ್ತಿ ಎನ್ನುವ ಗೊಂದಲ ಸೃಷ್ಟಿಯಾಗಿದ್ದಕ್ಕೆ ಕಾರಣ, ವಕ್ಫ್ ಆಸ್ತಿ ಇರುವುದು ವಿಜಯಪುರ ನಗರದ ವ್ಯಾಪ್ತಿಯಲ್ಲಿರುವ ಮಹಾಲಬಾಗಾಯತದಲ್ಲಿ. ಆದರೆ 1974ರ ಗೆಜಿಟ್ ನಲ್ಲಿ ಮಹಾಲಬಾಗಾಯತದ ಪಕ್ಕ ಬ್ರ್ಯಾಕೆಟ್ ನಲ್ಲಿ ಹೊನವಾಡ ಎಂದು ಬರೆದದ್ದು ರೈತರ ಆತಂಕಕ್ಕೆ ಕಾರಣವಾಗಿತ್ತು. ಆದರೆ ವಕ್ಫ್ ಮಂಡಳಿಯೇ 1977ರಲ್ಲಿ ತಿದ್ದುಪಡಿ ಮಾಡಿ, ಬ್ರಾಕೆಟ್ ನಲ್ಲಿದ್ದ ಹೊನವಾಡ ಹೆಸರನ್ನು ತೆಗೆದಿದೆ. ಇಲ್ಲಿ 11 ಎಕರೆ ಮಾತ್ರ ವಕ್ಫ್ ಗೆ ಸೇರಿದ್ದು, ಇದರಲ್ಲಿ 10 ಎಕರೆ 14 ಗುಂಟೆಯಲ್ಲಿ ಖಬರಸ್ತಾನವಿದೆ. ಉಳಿದ 24 ಗುಂಟೆಯಲ್ಲಿ ಈದ್ಗಾ, ಮಸೀದಿ ಇತ್ಯಾದಿ ಕಟ್ಟಡಗಳಿವೆ. ಉಳಿದ ಜಮೀನೆಲ್ಲ ರೈತರಿಗೆ ಸೇರಿದೆ. ಇದನ್ನು ತಹಸೀಲ್ದಾರ್ ಮತ್ತು ಜಿಲ್ಲಾಧಿಕಾರಿಗಳು ಈಗಾಗಲೇ ಸ್ಪಷ್ಟಪಡಿಸಿದ್ದು ಈ ಸಮಸ್ಯೆಯನ್ನು ಅಂತ್ಯಗೊಳಿಸಲಾಗಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ**



"ಯಾವುದು ನಿಯಮಾನುಸಾರ ವಕ್ಫ್ ಆಸ್ತಿಯೋ ಅದಷ್ಟೇ ಅವರಿಗೆ ಸೇರುತ್ತದೆ. ರೈತರಾಗಲಿ, ಖಾಸಗಿ ಮಾಲೀಕರಾಗಲಿ ಈ ಬಗ್ಗೆ ಗೊಂದಲಕ್ಕೆ ಒಳಗಾಗಬೇಕಾಗಿಲ್ಲ. ಕೆಲವರು ಹಿಂದು-ಮುಸ್ಲಿಂ ಸಾಮರಸ್ಯಕ್ಕೆ ಧಕ್ಕೆ ತರಲು ಪಕ್ಷ ರಾಜಕಾರಣ ಮಾಡುತ್ತಿದ್ದಾರೆ. ವಕ್ಫ್ ಆಸ್ತಿ ಕುರಿತ ತಪ್ಪು ಕಲ್ಪನೆ ಹೋಗಲಾಡಿಸಿ ಸಹಬಾಳ್ವೆಗೆ ದಾರಿ ಮಾಡಿಕೊಡಲಾಗುವುದು."

■ ಎಂ.ಬಿ.ಪಾಟೀಲ
ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರು,

## ಬಿಎಲ್ಡಿಇ ಸಂಸ್ಥೆ ಜನಸೇವೆ ರಾಷ್ಟ್ರವ್ಯಾಪಿ ವಿಸ್ತರಿಸುವ ಸದುದ್ದೇಶ

■ ಉದಯರಶ್ಮಿ ದಿನಪತ್ರಿಕೆ



### ಭಾರತೀಯ ಲಿಂಗಾಯತ ಡೆವಲೆಪಮೆಂಟ್ ಎಜುಕೇಶನ್ ಅಸೋಸಿಯೇಷನ್ ಎಂದು ಮರುನಾಮಕರಣ | ಅಧ್ಯಕ್ಷ ಎಂ.ಬಿ.ಪಾಟೀಲ ಸ್ಪಷ್ಟನೆ

ವಿಜಯಪುರ: ಸಂಸ್ಥೆಯ ಜನಸೇವೆಯನ್ನು ರಾಷ್ಟ್ರವ್ಯಾಪಿ ವಿಸ್ತರಿಸುವ ಸದುದ್ದೇಶದಿಂದ ಬಿಜಾಪುರ ಲಿಂಗಾಯತ ಡಿಸ್ಟ್ರೀಕ್ಟ್ ಎಜುಕೇಶನ್ ಅಸೋಸಿಯೇಷನ್ ಹೆಸರನ್ನು ಭಾರತೀಯ ಲಿಂಗಾಯತ ಡೆವಲೆಪಮೆಂಟ್ ಎಜುಕೇಶನ್ ಅಸೋಸಿಯೇಷನ್ ಎಂದು ಬದಲಾಯಿಸಲು ಇಂದು ರವಿವಾರ ನಡೆದ ಬಿ.ಎಲ್.ಡಿ.ಇ ಸಂಸ್ಥೆಯ ಸರ್ವ ಸದಸ್ಯರ ವಿಶೇಷ ಸಭೆಯಲ್ಲಿ ಒಕ್ಕೊರಲಿನಿಂದ ಅನುಮೋದನೆ ನೀಡಲಾಗಿದೆ.

ಸಂಸ್ಥೆಯ ಅಧ್ಯಕ್ಷ ಎಂ. ಬಿ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಈ ಮಹತ್ವದ ನಿರ್ಣಯ ಕೈಗೊಳ್ಳಲಾಗಿದೆ.

ಸಭೆಯಲ್ಲಿ ಮಾತನಾಡಿದ ಎಂ. ಬಿ. ಪಾಟೀಲ ಅವರು, 1910ರಲ್ಲಿ ವಿಜಯಪುರದಲ್ಲಿ ಬಿಜಾಪುರ ಲಿಂಗಾಯತ ಡಿಸ್ಟ್ರಿಕ್ಟ್ ಎಜುಕೆಶನಲ್ ಅಸೋಸಿಯೇಷನ್ ಪ್ರಾರಂಭವಾಗಿತ್ತು. ಈಗ ವಿಜಯಪುರ ಜಿಲ್ಲೆ ವಿಭಜನೆಯಾಗಿದೆ. ಸಂಸ್ಥೆಯ ವತಿಯಿಂದ ಬೆಂಗಳೂರಿನ ಹೃದಯ ಭಾಗದಲ್ಲಿ ರೂ. 300 ಕೋ. ವೆಚ್ಚದಲ್ಲಿ ಜಮೀನು ಖರೀದಿಸಲಾಗಿದೆ. ಮುಂಬರುವ ದಿನಗಲ್ಲಿ ಅಲ್ಲಿ ನಾನಾ ಕಾಲೇಜುಗಳನ್ನು ಪ್ರಾರಂಭಿಸುವ ಉದ್ದೇಶವಿದೆ. ಈ ಮೂಲಕ ಸಂಸ್ಥೆಯ ಕಾರ್ಯ ವ್ಯಾಪ್ತಿಯನ್ನು ರಾಜ್ಯಕ್ಕೆ ವಿಸ್ತರಿಸಲಾಗುತ್ತಿದೆ. ಭವಿಷ್ಯದಲ್ಲಿ ಸಂಸ್ಥೆಯ ಕಾರ್ಯ ವ್ಯಾಪ್ತಿಯನ್ನು ದೇಶಾದ್ಯಂತ ವಿಸ್ತರಿಸುವ ಸದುದ್ದೇಶದಿಂದ ಈಗ ಇರುವ ಸಂಸ್ಥೆಯ ಟೈಟಲ್ ನಲ್ಲಿ ಬಿಜಾಪುರ ಬದಲು ಭಾರತೀಯ ಮತ್ತು ಡಿಸ್ಟ್ರಿಕ್ಟ್ ಬದಲು ಡೆವಲೆಪಮೆಂಟ್ ಶಬ್ದಗಳನ್ನು ಸೇರಿಸಿ ಬದಲಾವಣೆ ಮಾಡಲಾಗುತ್ತಿದೆ. ಇನ್ನು ಮುಂದೆ ಬಿಜಾಪುರ ಲಿಂಗಾಯತ ಡಿಸ್ಟ್ರಿಕ್ಟ್ ಎಜುಕೇಶನ್ ಅಸೋಸಿಯೇನ್ ಹೆಸರು ಭಾರತೀಯ ಲಿಂಗಾಯತ ಡೆವಲೆಪಮೆಂಟ್ ಎಜುಕೇಶನ್ ಅಸೋಸಿಯೇಷನ್ ಎಂದು ಬದಲಾಗಲಿದೆ. ಈ ಮೂಲಕ ಸಂಸ್ಥೆಯ ಸೇವಾವ್ಯಾಪ್ತಿ ದೇಶಾದ್ಯಂತ ವಿಸ್ತರಣೆಯಾಗಲಿದೆ ಎಂದು ಹೇಳಿದರು.

ಸಂಸ್ಥೆಯ ಹೆಸರು ಬದಲಾವಣೆಯಾದರೂ ಅದರ ಮೂಲ ಸಂಕ್ಷಿಪ್ತ ಹೆಸರು ಬಿ.ಎಲ್.ಡಿ.ಇ. ಅಸೋಸಿಯೇಷನ್ ಯಥಾರೀತಿ ಉಳಿಯಲಿದೆ. ಈ ಮೂಲಕ ಸಂಸ್ಥೆಯ ಪ್ರಾತಃಸ್ಮರಣೀಯರಾದ ವಚನಪಿತಾಮಹ ಡಾ. ಫ. ಗು. ಹಳಕಟ್ಟಿ, ಬಂಥನಾಳ ಶ್ರೀಗಳು, ಶ್ರೀ ಬಿ. ಎಂ. ಪಾಟೀಲ ಹಾಗೂ ಬಂಗಾರಮ್ಮ ಸಜ್ಜನ ಅವರ ದೂರದೃಷ್ಠಿಯ ಸಮಾಜ ಸೇವೆಯ ಚಿಂತನೆಯನ್ನು ದೇಶಾದ್ಯಂತ ವಿಸ್ತರಿಸಲಾಗುತ್ತಿದೆ. ಇದರಿಂದ ಭವಿಷ್ಯ ಜನಾಂಗಕ್ಕೂ ಸಾಕಷ್ಟು ಅನುಕೂಲವಾಗಲಿದೆ ಎಂದು ಎಂ. ಬಿ. ಪಾಟೀಲ ಅವರು ಹೇಳಿದರು.

ಈ ಸಭೆಯಲ್ಲಿ ಸಂಸ್ಥೆಯ ಪ್ರದಾನ ಕಾರ್ಯದರ್ಶಿ ಜಿ. ಕೆ. ಪಾಟೀಲ, ನಿರ್ದೇಶಕರಾದ ಸುನೀಲಗೌಡ ಪಾಟೀಲ, ಬಸನಗೌಡ ಎಂ. ಪಾಟೀಲ, ಅಶೋಕ ವಾರದ, ಸಂಗು ಸಜ್ಜನ, ವಿ. ಎಸ್. ಪಾಟೀಲ ಬಬಲೇಶ್ವರ, ಕುಮಾರ ದೇಸಾಯಿ, ಕೆ. ಕೆ. ಪಾಟೀಲ ತೊರವಿ, ಡಾ. ಎ. ಬಿ. ಪಾಟೀಲ ಲಿಂಗದಳ್ಳಿ, ಆಜೀವ, ಪೋಷಕ ಮತ್ತು ಸರ್ವ ಸದಸ್ಯರು, ಬಿ.ಎಲ್.ಡಿ.ಇ ಸಂಸ್ಥೆಯ ನಾನಾ ಆಡಳಿತಾಧಿಕಾರಿಗಳು, ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

### ಶ್ರದ್ಧಾಂಜಲಿ

**ಸಭೆಯ ಪ್ರಾರಂಭದಲ್ಲಿ ಸಂಸ್ಥೆಯ ಮೃತ ಸದಸ್ಯರಾದ ಪ್ರಭು ಬಸವಂತಪ್ಪ ಕುಪ್ಪಿ, ಬಾಲಚಂದ್ರ ಅಪ್ಪಾಸಾಹೇಬ ಪಾಟೀಲ, ಪ್ರಕಾಶ ಶ್ರೀನಿವಾಸ ಶೆಟ್ಟಿ, ಹಣಮಂತ ರಾಮಪ್ಪ ಬಿರಾದಾರ, ಸಿದ್ದಪ್ಪ ನಿಂಗಪ್ಪ ಜನವಾಡ ಅವರಿಗೆ ಮೌನಾಚರಣೆ ಮೂಲಕ ಶ್ರದ್ಧಾಂಜಲಿ ಸಲ್ಲಿಸಲಾಯಿತು.**

### ನಾಗರಿಕ ಸೌಲಭ್ಯ ವಸತಿ ನಿಲಯ ಕಟ್ಟಡಕ್ಕೆ ಸಚಿವ ಎಂ.ಬಿ.ಪಾಟೀಲರಿಂದ ಭೂಮಿ ಪೂಜೆ

## ವಿಜಯಪುರಕ್ಕೂ ನನಗೂ ಭಾವನಾತ್ಮಕ ಸಂಬಂಧ: ಸುಧಾಮೂರ್ತಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜಿಲ್ಲಾಸ್ಪತ್ರೆಯ ಆವರಣದಲ್ಲಿ ನಿರ್ಮಾಣವಾಗುತ್ತಿರುವ ನಾಗರಿಕ ಸೌಲಭ್ಯ ವಸತಿ ನಿಲಯದಿಂದ ಹಲವು ಬಡಜನರಿಗೆ ಅನುಕೂಲವಾಗಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವ ಹಾಗೂ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಹೇಳಿದರು.

ಜಿಲ್ಲಾಡಳಿತ,ಜಿಲ್ಲಾ ಪಂಚಾಯತ್ ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ 2024-25ನೇ ಸಾಲಿನಲ್ಲಿ ಶ್ರೀಮತಿ ಸುಧಾ ಮೂರ್ತಿ ರಾಜ್ಯಸಭಾ ಸಂಸದರು ಇವರ ಸಂಸದರ ಪ್ರದೇಶಾಭಿವೃದ್ಧಿ ಯೋಜನೆ ಅಡಿಯಲ್ಲಿ ವಿಜಯಪುರ ಜಿಲ್ಲಾ ಆಸ್ಪತ್ರೆಯ ಆವರಣದಲ್ಲಿ ನಾಗರಿಕ ಸೌಲಭ್ಯ ವಸತಿ ನಿಲಯದ ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಅವರು, ಜಿಲ್ಲೆ, ರಾಜ್ಯ, ದೇಶ ಅಭಿವೃದ್ಧಿ ಹೊಂದಲು ಸಮಾಜದ ಪ್ರತಿಯೊಬ್ಬ ವ್ಯಕ್ತಿ ಆರೋಗ್ಯವಂತರಾಗಿರುವುದು ಅತ್ಯಂತ ಅವಶ್ಯಕವಾಗಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರಗಳು ಸಹ ಅತಿ ಹೆಚ್ಚಿನ ಅನುದಾನ ಆರೋಗ್ಯ ಕ್ಷೇತ್ರಕ್ಕೆ ವ್ಯಯಿಸಿ ಸ್ವಸ್ಥ ಸಮಾಜ ನಿರ್ಮಾಣಕ್ಕಾಗಿ ಹಲವು ಯೋಜನೆಗಳನ್ನು ಜಾರಿಗೊಳಿಸಿದೆ.ಈ ಯೋಜನೆಗಳ ಸದುಪಯೋಗ ಪಡೆದುಕೊಂಡು ಪ್ರತಿಯೊಬ್ಬರು ಸ್ವಾಸ್ಥ ಸುಂದರ ಬದುಕು ರೂಪಿಸಿಕೊಳ್ಳಬೇಕು ಎಂದು ಅವರು ಹೇಳಿದರು.

ಆರೋಗ್ಯ ಮುಂಜಾಗ್ರತೆಗೆ ಹೆಚ್ಚಿನ ಒತ್ತು ನೀಡುವ ನಿಟ್ಟಿನಲ್ಲಿ ಇಲ್ಲಿ ನಿರ್ಮಾಣವಾಗುತ್ತಿರುವ ನಾಗರಿಕ ಸೌಲಭ್ಯವುಳ್ಳ ವಸತಿ ನಿಲಯ ಅತ್ಯುಪಯುಕ್ತವಾಗಿದೆ ಎಂದು ಹೇಳಿದರು.

ಜಿಲ್ಲಾಸ್ಪತ್ರೆಗೆ ಆಗಮಿಸುವ ರೋಗಿಗಳ ಸಂಬಂಧಿಕರಿಗೆ ನಿರ್ಮಾಣವಾಗುತ್ತಿರುವ ನಾಗರಿಕ ವಸತಿ ನಿಲಯ ಅನುಕೂಲ ಒದಗಿಸಲಿದೆ. ಇದರಿಂದ ರೈತಾಪಿ ವರ್ಗ ಸೇರಿದಂತೆ ಬಡವರಿಗೆ ಅನುಕೂಲವಾಗಲಿದ್ದು, ಆರ್ಥಿಕ ಹೊರೆಯು ಕಡಿಮೆಯಾಗಲಿದೆ. ಕಟ್ಟಡದ ನಿರ್ಮಾಣದ ನಂತರ ಅದರ ನಿರ್ವಹಣೆ ಅತ್ಯಂತ ಮುಖ್ಯವಾಗಿದೆ. ಸುಧಾಮೂರ್ತಿ ಅವರು ವಿಜಯಪುರ ಜಿಲ್ಲೆಯನ್ನು ನೋಡಲ್ ಜಿಲ್ಲೆಯನ್ನಾಗಿ ಆಯ್ಕೆ ಮಾಡಿರುವುದಕ್ಕೆ ಸಚಿವರು ಅಭಿನಂದನೆ ಸಲ್ಲಿಸಿ, ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿ ಎಲ್ಲರೂ ಶ್ರಮಿಸೋಣ ಎಂದು ಹೇಳಿದರು.

ರಾಜ್ಯಸಭಾ ಸಂಸದೆ ಡಾ.ಸುಧಾಮೂರ್ತಿ ಅವರು ಮಾತನಾಡಿ, ಜಿಲ್ಲಾಸ್ಪತ್ರೆಗೆ ರೋಗಿಗಳೊಂದಿಗೆ ಬರುವವರಿಗಾಗಿ ಸೂಕ್ತ ವಸತಿ ವ್ಯವಸ್ಥೆ ಕಲ್ಪಿಸುವ ನಿಟ್ಟಿನಲ್ಲಿ ನಿರ್ಮಾಣವಾಗುತ್ತಿರುವ ನಾಗರಿಕ ಸೌಲಭ್ಯ ವಸತಿ ನಿಲಯ ಕಟ್ಟಡದ ಸದುಪಯೋಗವಾಗಬೇಕು. ವಿವಿಧೆಡೆ ನಾಗರಿಕ ಸೌಲಭ್ಯವುಳ್ಳ ವಸತಿ ನಿಲಯ ನಿರ್ಮಾಣ ಮಾಡಲಾಗಿದೆ. ರೋಗಿಯೊಂದಿಗೆ ಬರುವ ಸಹಾಯಕರಿಗೆ ಅನುಕೂಲವಾಗಲಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಮಾತನಾಡಿ, ಕರೋನಾ ಮಹಾಮಾರಿ ಸಂದರ್ಭದಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುವ ಮೂಲಕ ಜಿಲ್ಲಾ ಅಸ್ಪತ್ರೆ ಮಾದರಿಯಾಗಿದೆ. ಜಿಲ್ಲಾಸ್ಪತ್ರೆಯಲ್ಲಿರುವ ಡಯಾಲಿಸಿಸ್ ಕೇಂದ್ರ, ಆಕ್ಸಿಜನ್ ಪ್ಲಾಂಟ್‌ದಿಂದ ಹಲವು ರೋಗಿಗಳಿಗೆ ಅನುಕೂಲವಾಗಿದೆ. ಸುಧಾಮೂರ್ತಿಯವರ ಈ ಪ್ರಯತ್ನದಿಂದ ಅನೇಕ ಬಡಜನರಿಗೆ ಅನುಕೂಲವಾಗಲಿದ್ದು, ಆಸ್ಪತ್ರೆಗೆ ಬರುವ ರೋಗಿಗಳು ಇದರ ಸದುಪಯೋಗ ಪಡೆದುಕೊಳ್ಳಬೇಕು. ಶಾಸಕ ಪ್ರದೇಶಾಭಿವೃದ್ಧಿ ನಿಧಿಯಡಿ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಬಾಲವಿಕಾಸ ಅಕಾಡೆಮಿ ಅಧ್ಯಕ್ಷ ಸಂಗಮೇಶ ಬಬಲೇಶ್ವರ, ಮಹಾನಗರ ಪಾಲಿಕೆ ಮಹಾಪೌರರಾದ ಶ್ರೀಮತಿ ಮಹೇಜಬಿನ ಹೊರ್ತಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಕನ್ನಾನ್ ಮುಶ್ರೀಫ್, ಜಿಲ್ಲಾಧಿಕಾರಿ ಟಿ.ಭೂಬಾಲನ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರಸನ್ನ ದೇಸಾಯಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಸಂಪತ್ ಗುಣಾರಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಪಾಲಿಕೆ ಸದಸ್ಯೆ ಆರತಿ ಶಹಾಪುರ, ಅಲ್-ಅಮೀನ್ ಮೆಡಿಕಲ್ ಕಾಲೇಜಿನ ಡಾ.ಬಿ.ಎಸ್.ಪಾಟೀಲ, ಬಿಎಲ್‌ಡಿಇ ಸಂಸ್ಥೆಯ ಶ್ರೀ ಬಿ.ಎಂ.ಪಾಟೀಲ ವೈದ್ಯಕೀಯ ಕಾಲೇಜಿನ ಪ್ರಾಚಾರ್ಯ ಡಾ.ಅರವಿಂದ ಪಾಟೀಲ, ಬಿಎಲ್‌ಡಿಇ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ರಾಜೇಶ ಹೊನ್ನುಟಗಿ, ಜಿಲ್ಲಾಸ್ಪತ್ರೆಯ ರವಿಕಿತ್ತೂರ ಸೇರಿದಂತೆ ವಿವಿಧ ಅಧಿಕಾರಿಗಳು, ಆಸ್ಪತ್ರೆ ವೈದ್ಯರು, ಸಿಬ್ಬಂದಿಗಳು ಉಪಸ್ಥಿತರಿದ್ದರು.



"ವಿಜಯಪುರಕ್ಕೂ ನನಗೂ ಭಾವನಾತ್ಮಕ ಸಂಬಂಧವಿದೆ. ಈ ಹಿನ್ನಲೆಯಲ್ಲಿ ವಿಜಯಪುರ ಜಿಲ್ಲೆಯನ್ನು ನೋಡಲ್ ಜಿಲ್ಲೆಯಾಗಿ ಆಯ್ಕೆ ಮಾಡಿ ಅಭಿವೃದ್ದಿಪಡಿಸಲಾಗುತ್ತಿದೆ. ಮಹಿಳಾ ಸಬಲೀಕರಣಕ್ಕೆ ಒತ್ತು ನೀಡಲಾಗುವುದು. ಮಹಿಳೆಯರಲ್ಲಿರುವ ಪ್ರತಿಭೆಗಳನ್ನು ಹೊರತಂದು ಅವಕಾಶ ಕಲ್ಪಿಸಲಾಗುವುದು. ಈಗಾಗಲೇ ತಾಳಿಕೋಟೆ ಮತ್ತು ಬಸವನಬಾಗೇವಾಡಿಯಲ್ಲಿ ಗ್ರಂಥಾಲಯ ನಿರ್ಮಾಣ ಮಾಡಲಾಗುತ್ತಿದೆ. ಜಿಲ್ಲೆಯ ಸರ್ವಾಂಗೀಣ ಅಭಿವೃದ್ಧಿಗೆ ಎಲ್ಲರೂ ಕೈ ಜೋಡಿಸಿ ಸಹಕರಿಸಬೇಕು."

■ ಡಾ.ಸುಧಾಮೂರ್ತಿ
ರಾಜ್ಯಸಭಾ ಸಂಸದೆ

# ರಾಷ್ಟ್ರೀಯ ಸ್ವಯಂ ಸೇವಕ ಸಂಘದಿಂದ ಭವ್ಯ ಪಥಸಂಚಲನ



■ ಉದಯರಶ್ಮಿ ದಿನಪತ್ರಿಕೆ

ಮುದ್ದೇಬಿಹಾಳ: ರಾಷ್ಟ್ರೀಯ ಸ್ವಯಂ ಸೇವಕ ಸಂಘದ ವಾರ್ಷಿಕೋತ್ಸವದ ನಿಮಿತ್ತ ಪಟ್ಟಣದಲ್ಲಿ ಶನಿವಾರ ಸಂಜೆ ನಡೆದ ಭವ್ಯ ಪಥಸಂಚಲನ ಆಕರ್ಷಣೀಯವಾಗಿತ್ತು.

ಪಟ್ಟಣದ ಹುಡ್ಕೋ ಬಡಾವಣೆಯ ಗವಿಸಿದ್ದೇಶ್ವರ ಕ್ರೀಡಾ ಮೈದಾನದಿಂದ ಶುರುವಾದ ಪಥಸಂಚಲನ ನ್ಯಾಯಾಲಯದ ಹಿಂದಿನ ಈಶ್ವರ ದೇವಸ್ಥಾನ, ಎಸ್‌ಬಿಐ ಬ್ಯಾಂಕ್ ರಸ್ತೆ, ವೀರರಾಣಿ ಕಿತ್ತೂರು ಚನ್ನಮ್ಮ ವೃತ್ತ, ವಾಲ್ಮೀಕಿ ವೃತ್ತ, ಲಕ್ಷ್ಮೀ ವೆಂಕಟೇಶ್ವರ ದೇವಸ್ಥಾನ, ಛತ್ರಪತಿ ಶಿವಾಜಿ ವೃತ್ತ, ಸಿದ್ರಾಮೇಶ್ವರ ವೃತ್ತ, ನೇತಾಜಿ ಗಲ್ಲಿ, ಕುಂಬಾರ ಗಲ್ಲಿ, ಸರಾಫ್ ಬಜಾರ, ದ್ಯಾಮವ್ವ ದೇವಿ ದೇವಸ್ಥಾನ, ಮುಖ್ಯ ಬಜಾರ, ಬಸವೇಶ್ವರ ವೃತ್ತ, ಅಂಬೇಡ್ಕರ್ ವೃತ್ತ ಮಾರ್ಗವಾಗಿ ವಿಬಿಸಿ ಹೈಸ್ಕೂಲ್ ಮೈದಾನದವರೆಗೆ ಘೋಷದೊಂದಿದೆ ಸಂಘದ ಕಾರ್ಯರ್ತರು ಅತ್ಯಂತ ಶಿಸ್ತಿನಿಂದ ಭಗವಾಧ್ವಜಕ್ಕೆ ಗೌರವ ಸಲ್ಲಿಸುತ್ತ ಸಾಗಿದರು. ಹಿಂದೂ ಭಗಿನಿಯರು ಗಲ್ಲಿಗಳನ್ನು ಸ್ವಚ್ಛಗೊಳಿಸಿ ರಂಗೋಲಿ ಹಾಕಿ ಪವಿತ್ರ ಭಗವಾಧ್ವಜಕ್ಕೆ ಗೌರವ ಸಲ್ಲಿಸಿದರೆ ಹಿಂದೂ ಬಾಂಧವರು ತಳಿರು ತೋರಣಗಳಿಂದ ರಸ್ತೆಗಳನ್ನು ಅಲಂಕರಿಸಿದ್ದರು. ಪಥಸಂಚಲನ ಗಲ್ಲಿಗಳಲ್ಲಿ ಆಗಮಿಸುತ್ತಿದ್ದಂತೆ

ಗಣವೇಶಧಾರಿ ಸಂಘದ ಕಾರ್ಯಕರ್ತರಿಗೂ ಸೇರಿದಂತೆ ಭಗವಾಧ್ವಜಕ್ಕೆ ಪುಷ್ಪ ಸಮರ್ಪಿಸುವ ಮೂಲಕ ಗೌರವ ಸಲ್ಲಿಸಿದರು. ಹಲವರು ತಮ್ಮ ಮಕ್ಕಳಿಗೆ ವೀರ ಪುರುಷರ ವೇಷ ತೊಡಿಸಿ ರಾಷ್ಟ್ರಪ್ರೇಮ ಮೆರೆಯುವ ಮೂಲಕ ಸ್ವಾಗತಿಸಿದರು. ಡಿವಾಯ್‌ಎಸ್‌ಪಿ ಬಲ್ಲಪ್ಪ ನಂದಗಾವಿ, ಸಿಪಿಐ ಮಲ್ಲಿಕಾರ್ಜುನ ತುಳಸಿಗೇರಿ, ಪಿಎಸ್‌ಐ ಸಂಜೀವ ತಿಪರೆಡ್ಡಿ, ತಾಳಿಕೋಟೆ ಪಿಎಸ್‌ಐ ರಾಮನಗೌಡ ಸಂಕನಾಳ ಸೇರಿದಂತೆ ಪೊಲೀಸ್ ಸಿಬ್ಬಂದಿ ಬಿಗಿ ಬಂದೋಬಸ್ತ್ ವಹಿಸಿದ್ದರು.

# ಕಲಾವಿದ ಗಂಗಾಧರ ಗೆ 'ಜಾನಪದ ಪ್ರಪಂಚ' ಪ್ರಶಸ್ತಿ ಪ್ರದಾನ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಕನ್ನಡ ಜಾನಪದ ಪರಿಷತ್ ರಾಜ್ಯ ಘಟಕ ಕೊಡಮಾಡುವ " ಜಾನಪದ ಪ್ರಪಂಚ " ಪ್ರಶಸ್ತಿಯನ್ನು ಬೆಂಗಳೂರಿನ ಸೇಂಟ್ ಕ್ಲಾರೆಟ್ ಕಾಲೇಜು ಸಭಾಂಗಣದಲ್ಲಿ ಕ ಜಾ ಪ ರಾಜ್ಯಾಧ್ಯಕ್ಷ ಡಾ ಎಸ್ ಬಾಲಾಜಿಯವರ ಅಧ್ಯಕ್ಷತೆಯಲ್ಲಿ ವಿಜಯಪುರ ಜಿಲ್ಲೆಯ ಕೊಲ್ಹಾರ ತಾಲೂಕಿನ ಹಣಮಾಪುರ ಹಲಗೆಮಜಲು ಕಲಾವಿದ ಗಂಗಾಧರ ಬಡಿಗೇರನಿಗೆ ನೀಡಿ ಗೌರವಿಸಲಾಯಿತು.

ರೆವರೆಂಡ್ ಫಾದರ್ ಜೋಸೆಫ್ ಎಸ್ ಸಾನಿಧ್ಯದಲ್ಲಿ, ಕರ್ನಾಟಕ ಜಾನಪದ ವಿಶ್ವವಿದ್ಯಾನಿಲಯದ ಕುಲಸಚಿವ ಶಹಜಹಾನ್ ಮುದಕವಿ ಉದ್ಘಾಟಿಸಿದರು. ಅಂತಾರಾಷ್ಟ್ರೀಯ ಜಾನಪದ ಕಲಾವಿದ ಡಾ ಅಪ್ಪಗೆರೆ ತಿಮ್ಮರಾಜು, ರಾಜ್ಯ ಸಹಕಾರಿ ಮಹಾಮಂಡಳದ ನಿಬಂಧಕ ಲಕ್ಷ್ಮೀಪತಯ್ಯ, ಕನ್ನಡ ಸಾಹಿತ್ಯ ಪರಿಷತ್ ಬೆಂಗಳೂರು ಜಿಲ್ಲಾಧ್ಯಕ್ಷ ಪ್ರಕಾಶ ಮೂರ್ತಿ, ದತ್ತಿದಾನಿ ಸೌಭಾಗ್ಯ ಟಿ ಕೆ ಗೌಡ , ಕನ್ನಡ ಜಾನಪದ ಪರಿಷತ್ ಬೆಂಗಳೂರು ಜಿಲ್ಲಾಧ್ಯಕ್ಷರಾದ ಡಾ ರಾಜು ಗೂಂಡಾಪುರ , ಡಾ ರಿಯಾಜ್ ಪಾಷ ಮತ್ತು ಕನ್ನಡ ಜಾನಪದ ಪರಿಷತ್ ವಿಜಯಪುರ ಜಿಲ್ಲಾಧ್ಯಕ್ಷ ಬಾಳನಗೌಡ ಉಪಸ್ಥಿತ-ರಿದ್ದರು.

# ಸ್ವಾವಲಂಬಿ ಬದುಕಿಗೆ ವೃತ್ತಿಪರ ತರಬೇತಿ ಅವಶ್ಯ :ಪ್ರೊ.ರಮೇಶ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: 'ಯುವಕರ ಸ್ವಾವಲಂಬಿ ಬದುಕಿಗೆವೃತ್ತಿಪರತರಬೇತಿಅವಶ್ಯವಾಗಿದ್ದು, ಇಂದಿನ ತ್ವರಿತ-ಬದಲಾಗುತ್ತಿರುವ ಆರ್ಥಿಕ ಸನ್ನಿವೇಶದಲ್ಲಿ ಮುಂದಿನ ಪೀಳಿಗೆಗೆ ನಿರ್ದಿಷ್ಟ ವಿಶೇಷ ಕೌಶಲ್ಯಗಳನ್ನು ಒದಗಿಸುವುದು ಅತ್ಯಗತ್ಯ' ಎಂದು ಇಂಡಿ ಸರಕಾರಿ ಪ್ರಥ-'ಮ ದರ್ಜೆ ಕಾಲೇಜಿನ ಪ್ರಾಚಾರ್ಯ ಪ್ರೊ. ಆರ್ ಎಸ್ ರಮೇಶ ಹೇಳಿದರು.

ಅವರು ಶನಿವಾರದಂದು ಪಟ್ಟಣದ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ ಹಮ್ಮಿಕೊಂಡ ವಾರ್ಷಿಕ ಘಟಿ-ಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದರು. ತರಬೇತಿ ಸಂಸ್ಕೃತಿಯು ನಿರಂತರ ಕಲಿಕೆ ಮತ್ತು ಅಭಿವೃದ್ಧಿಯನ್ನು ಉತ್ತೇಜಿಸುತ್ತದೆ. ಇದು ನಿರಂತರ ಸುಧಾರಣೆಗೆ ಕಾರಣವಾಗುತ್ತದೆ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಹಿರೇರೂಗಿ ಯುಬಿ-ಎಸ್ ಶಾಲಾ ಶಿಕ್ಷಕ ಸಂತೋಷ ಬಂಡೆ ಮಾತನಾಡಿ,ವೃತ್ತಿಪರ ತರಬೇತಿಯು ಯುವ ವಿದ್ಯಾರ್ಥಿಗಳಿಗೆ ಉದ್ಯೋಗಕ್ಕೆ ಸಿದ್ಧರಾಗಲು ಸಹಕರಿಸಿ, ಸ್ವತಂತ್ರ ಬದುಕು ಕಟ್ಟಿಕೊಳ್ಳಲು ಪ್ರೇರಣೆಯಾಗುತ್ತದೆ. ದೇಶದ ಆರ್ಥಿಕ ಬೆಳವಣಿಗೆಗೆ ಧನಾತ್ಮಕವಾಗಿ ಕೊಡುಗೆ ನೀಡುವತ್ತ ಯುವಸಮೂಹ ಗಮನಹರಿಸಬೇಕು ಎಂದು ಹೇಳಿದರು.

ತರಬೇತಿ ಸಂಸ್ಥೆಯ ಪ್ರಭಾರಿ ಪ್ರಾಚಾರ್ಯ ಪಿ ವೈ ರಜನೀಕರ ಅಧ್ಯಕ್ಷತೆ ವಹಿಸಿ ಮಾತನಾಡಿ,'ಘಟಿಕೋತ್ಸವ ಎನ್ನುವುದು ಸಂಭ್ರಮಾಚರಣೆಯಲ್ಲ. ಬದುಕು ರೂಪಿಸುವ ಕಾಲ. ನಿಮ್ಮ ಮೇಲೆ ಪೋಷಕರು ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿರುತ್ತಾರೆ. ಅವರ ನಿರೀಕ್ಷೆ ಹುಸಿಯಾಗದ ಹಾಗೆ ಓದಿ ಜೀವನದಲ್ಲಿ ಮುಂದೆ ಬರಬೇಕು' ಎಂದು ಹೇಳಿದರು.

2022-24ನೇ ಸಾಲಿನಲ್ಲಿ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ವೃತ್ತಿ ಪ್ರಮಾಣ ಪತ್ರ ವಿತರಿಸಲಾಯಿತು. ಸಂಸ್ಥೆಯ ಉಪನ್ಯಾಸಕರಾದ ಗಂಗಾಧರ ಭಾಗೆಳ್ಳಿ, ರಮೇಶ ಮೇತ್ರಿ, ಸಂತೋಷ ಜಾಧವ, ಪ್ರೇಮಾನಂದ ದೇಸಾಯಿ, ರವಿ ಹಾದಿಮನಿ, ಅಬ್ದುಲ್ಲಾ, ರೇಶ್ಮಾ ಸೇರಿದಂತೆ ಪಾಲಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# 28-30 ರಂದು ಮಹಿಳಾ ವಿವಿ ಪ್ರವೇಶ ಕೌನ್ಸೆಲಿಂಗ್

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯದ ವಿವಿಧ ಸ್ನಾತಕೋತ್ತರ, ಪಿಜಿ ಡಿಪ್ಲೋಮಾ, ವ್ಯಾಲ್ಯು ಆಡೆಡ್ ಡಿಪ್ಲೋಮಾ, ವ್ಯಾಲ್ಯು ಆಡೆಡ್ ಅಡ್ವಾನ್ಸ್ ಡಿಪ್ಲೋಮಾ ಮತ್ತು ಸರ್ಟಿಫೀಕೇಟ್ ಕೋರ್ಸ್‌ಗಳಿಗೆ ಪ್ರವೇಶ ಪಡೆಯಲು ಇದೇ ಅಕ್ಟೋಬರ್ 28ರಂದು ಬೆಳಿಗ್ಗೆ 10.30ರಿಂದ ಕೌನ್ಸೆಲಿಂಗ್ ಆರಂಭವಾಗಲಿದೆ ಎಂದು ಕುಲಸಚಿವ ಶಂಕರಗೌಡ ಸೋಮನಾಳ ತಿಳಿಸಿದ್ದಾರೆ.

ಮಹಿಳಾ ವಿವಿಯ ವಿವಿಧ ಕೋರ್ಸ್‌ಗಳಿಗೆ ಈಗಾಗಲೇ ಯು ಯುಸಿಎಂಎಸ್ ಮೂಲಕ ಅರ್ಜಿ ಸಲ್ಲಿಸಿರುವ ವಿದ್ಯಾರ್ಥಿನಿಯರು ದಿನಾಂಕ 28ರಂದು ಅಗತ್ಯ ಮೂಲ ದಾಖಲೆಗಳೊಂದಿಗೆ ಕಡ್ಡಾಯವಾಗಿ ಹಾಜರಿದ್ದು ಪ್ರವೇಶ ಪಡೆದುಕೊಳ್ಳಬಹುದಾಗಿದೆ. ದಿನಾಂಕ 29 ರಂದು ಸೂಪರ್ ನ್ಯೂಮರಿ ಕೋಟಾದ ಅಡಿಯಲ್ಲಿ ಪ್ರವೇಶ ಪಡೆದುಕೊಳ್ಳಬಹುದಾಗಿದ್ದು ದಿನಾಂಕ 30ರಂದು ಸೆಲ್ಫ್ ಸಪೋರ್ಟಿಂಗ್ ಯೋಜನೆ ಅನ್ವಯ ಪ್ರವೇಶ ಪಡೆದುಕೊಳ್ಳಬಹುದಾಗಿದೆ ಎಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಶಂಕರಗೌಡ ಸೋಮನಾಳ, ಕುಲಸಚಿವರು, ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾನಿಲಯ, ವಿಜಯಪುರ- 586108. ದೂರವಾಣಿ ಸಂಖ್ಯೆ: 08352-297062, 7795122960, 7204889855 ಮತ್ತು 9901827696; website: www.kswu.ac.in ಸಂಪರ್ಕಿಸಬಹುದಾಗಿದೆ.

# ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಭೇಟಿ - ಪರಿಶೀಲನೆ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಗ್ರಾಮ ಆಡಳಿತ ಅಧಿಕಾರಿ ಹುದ್ದೆಗಳ ನೇರ ನೇಮಕಾತಿಗಾಗಿ ಜಿಲ್ಲೆಯಲ್ಲಿ ಅ.26 ರಂದು ನಡೆದ ಕಡ್ಡಾಯ ಕನ್ನಡ ಪರೀಕ್ಷಾ ಕೇಂದ್ರಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಅವರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ನಗರದ ಎಸ್.ಎಸ್.ಶಾಲೆ, ವಿದ್ಯಾನಿಕೇತನ ಶಾಲೆ, ದರಬಾರ ಶಾಳೆ ಪರೀಕ್ಷಾ ಕೇಂದ್ರ ಸೇರಿದಂತೆ ವಿವಿಧ ಪರೀಕ್ಷಾ ಕೇಂದ್ರಗಳಿಗೆ ಶನಿವಾರ ಭೇಟಿ ನೀಡಿ ಅವರು ಪರಿಶೀಲನೆ ನಡೆಸಿದರು.

# ಗೂಡಂಗಡಿಗಳ ತೆರವು ಕಾರ್ಯ ಯೋಗ್ಯ ನಿರ್ಣಯ :ಕಾಂಬಳೆ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ನಗರದ ಸೌಂದರ್ಯೀಕರಣಕ್ಕೆ ಮುನ್ನುಡಿ ಬರೆದಿರುವ ಪುರಸಭೆ ಅಧ್ಯಕ್ಷರಿಗೂ ಸರ್ವ ಸದಸ್ಯರಿಗೂ, ಆಡಳಿತ ವರ್ಗಕ್ಕೂ, ಪೊಲೀಸ್ ಇಲಾಖೆಯ ಅಧಿಕಾರಿಗಳಿಗೂ ಮತ್ತು ಸಿಬ್ಬಂದಿಗಳಿಗೂ ಸಿಂದಗಿ ಯೋಜನಾ ಅಭಿವೃದ್ಧಿ ಪ್ರಾಧಿಕಾರವು ಅಭಿನಂದಿಸುತ್ತದೆ ಎಂದು ಯೋಜನಾ ಪ್ರಾಧಿಕಾರದ ಅಧ್ಯಕ್ಷ ಬಸವರಾಜ ಕಾಂಬಳೆ ತಿಳಿಸಿದರು.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು, ಅಕ್ರಮವಾಗಿ ನೆಲೆಯೂರಿದ ಗೂಡಂಗಡಿಗಳ ತೆರವುಗೊಳಿಸಿದ ಪುರಸಭೆ ಕಾರ್ಯ ಅತ್ಯಂತ ಯೋಗ್ಯವಾದ ನಿರ್ಣಯ. ವಿಜಯಪುರ ಜಿಲ್ಲೆಯಯಲ್ಲಿಯೇ ಶಿಕ್ಷಣ, ವ್ಯಾಪಾರ ಕ್ಷೇತ್ರದಲ್ಲಿ ಅತ್ಯಂತ ಮುಂಚೂಣಿ ನಗರವೆಚಿದರೆ ಸಿಂದಗಿ. ಪಟ್ಟಣದ ರಸ್ತೆಗಳು ಅಕ್ರಮ ಒತ್ತುವರಿಯಿಂದ ನಗರ ಸೌಂದರ್ಯ ಮಾಸಿಹೋಗಿತ್ತು. ಅಭಿವೃದ್ಧಿ ಮತ್ತು ಸೌಂದರ್ಯದಿಂದ ಹಿಂದುಳಿದಿತ್ತು. ಎಲ್ಲ ರಂಗಗಳಲ್ಲೂ ಮುಂದುವರೆದರು ಅಕ್ರಮ ಒತ್ತುವರಿಯ ಗೂಡಂಗಡಿಗಳ ಕಪ್ಪು ಚುಕ್ಕೆಯಾಗಿತ್ತು.

ಆದರೆ ಈಗಿನ ಸಂದರ್ಭದಲ್ಲಿ ಮಾನ್ಯ ಪುರಸಭೆ ಅಧ್ಯಕ್ಷರು, ಸದಸ್ಯರು ಆಡಳಿತ ನಡೆಸಿದ ಕಾರ್ಯಾಚರಣೆಯ ಫಲದಿಂದ ರಸ್ತೆಗಳ ಅಗಲೀಕರಣಗೊಂಡು ಸುಂದರವಾದ ಫುಟ್ಪಾತ್ ಹಾಗೂ ಬೇಸಿಗೆ ಬಿಸಿಲಿನಿಂದ ತಪ್ಪಿಸಿಕೊಳ್ಳಲು ಮರಗಳು ನೆಡುವ ಮುಖಾಂತರ ಮಿನಿ ಬಸ್ ನಿಲ್ದಾಣಗಳು ಸ್ಥಾಪಿಸುವ ಸಲುವಾಗಿ ಇಟ್ಟ ಈ ದಿಟ್ಟ ಹೆಜ್ಜೆಯನ್ನು ನಗರ ಯೋಜನಾ ಪ್ರಾಧಿಕಾರ ವತಿಯಿಂದ ಸ್ವಾಗತಿಸುತ್ತೇನೆ. ಆದ್ದರಿಂದ ವ್ಯಾಪಾರಸ್ಥರಾರು ಧೃತಿಗೆಡಬೇಕಾಗಿಲ್ಲ. ಶಾಸಕ ಅಶೋಕ ಮನಗೂಳಿ ಅವರು ನಿಮ್ಮ ಜೊತೆ ಇದ್ದಾರೆ. ಮುಂಬರುವ ದಿನಮಾನಗಳಲ್ಲಿ ಸಿಂದಗಿ ನಗರದಲ್ಲಿ ಮೆಗಾ ಮಾರುಕಟ್ಟೆ ನಿರ್ಮಾಣ ಮಾಡುವಂತಾ ಯೋಜನೆ ಇದೆ ಮತ್ತು ಪುರಸಭೆ ವ್ಯಾಪ್ತಿಯ ಸ್ಥಳಗಳಲ್ಲಿ ವ್ಯಾಪಾ-ರಿಗಳಿಗೆ ಅವಕಾಶ ಕಲ್ಪಿಸಿಕೊಡುತ್ತಾರೆ. ವ್ಯಾಪಾರಿಗಳು ಯಾವುದೇ ವದಂತಿಗಳಿಗೆ ಕಿವಿಗೊಡದೇ ನಗರದ ಅಭಿವೃದ್ಧಿಯಲ್ಲಿ ಸಹಕಾರ ನೀಡಿ ತಾವು ಅಭಿವೃದ್ಧಿಗೆ ಕಾರಣೀಭೂತರಾಗಬೇಕು ಎಂದು ಮನವಿ ಮಾಡಿಕೊಂಡಿದ್ದಾರೆ.

# ಭರದಿಂದ ಸಾಗಿದ ಗೂಡಂಗಡಿಗಳ ತೆರವು ಕಾರ್ಯಾಚರಣೆ



■ ಉದಯರಶ್ಮಿ ದಿನಪತ್ರಿಕೆ

ಸಿಂದಗಿ: ನಗರದ ಬಹುತೇಕ ರಸ್ತೆ ಹಾಗೂ ಫುಟ್ ಪಾತ್ ಗಳ ಮೇಲೆ ಅಕ್ರಮವಾಗಿ ನಿರ್ಮಿಸಿದ್ದ ಗೂಡಂಗಡಿಗಳ ತೆರವು ಕಾರ್ಯಾಚರಣೆ ಶನಿವಾರ ಪುರಸಭೆ ಮುಖ್ಯಾಧಿಕಾರಿ ರಾಜಶೇಖರ ಅವರ ನೇತೃತ್ವದಲ್ಲಿ ಜರುಗಿತು. ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ರಾಜಶೇಖರ ಮಾತನಾಡಿ, ಸುಗಮ ಸಂಚಾರಕ್ಕೆ ಅವಕಾಶ ಕಲ್ಪಿಸುವ ನಿಟ್ಟಿನಲ್ಲಿ ತೆರವು ಕಾರ್ಯಾಚರಣೆ ಹಮ್ಮಿಕೊಳ್ಳಲಾಗಿದೆ. ವ್ಯಾಪಾರಸ್ಥರು ರಸ್ತೆ ಹಾಗೂ ಫುಟ್ ಪಾತ್ ಗಳನ್ನು ಆಕ್ರಮಿಸಿಕೊಂಡಿರುವ ಕಾರಣ ವಾಹನಗಳ ನಿಲುಗಡೆಗೆ ಹಾಗೂ ಪಾದಾಚಾರಿಗಳ ಸಂಚಾರಕ್ಕೆ ಅನಾನುಕೂಲವಾಗುತ್ತಿರುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ಗೂಡಂಗಡಿಗಳನ್ನು ತೆರವುಗೊಳಿಸಿ ಸಾರ್ವಜನಿಕರ ಸುಗಮ ಸಂಚಾರಕ್ಕೆ ಅನಕೂಲ ಕಲ್ಪಿಸುವ ದೃಷ್ಟಿಯಿಂದ ತೆರವು ಕಾರ್ಯಾಚರಣೆ ಕೈಗೊಳ್ಳಲಾಗಿದೆ. ಈ ವೇಳೆ ಪುರಸಭೆ ಸಿಬ್ಬಂದಿ ಸಿದ್ದು ಅಂಗಡಿ, ಅಜರ್ ನಾಟಿಕಾರ್, ನಬಿರಸೂಲ್ ಉಸ್ತಾದ್, ಇಂದುಮತಿ ಮಣೂರ, ದಯಾನಂದ ಇವಣಿ ಸೇರಿದಂತೆ ಇನ್ನಿತರ ಸಿಬ್ಬಂದಿ ಇದ್ದರು.

# ಶರಣರು ವೈದಿಕತೆಯನ್ನು ವಿರೋಧಿಸಿದರು: ಡಾ. ಮೀನಾಕ್ಷಿ ಬಾಳಿ



ಕಲಬುರಗಿ:ಬಸವಣ್ಣನವರು ಕರುಣಿಸಿದ ಇಷ್ಟಲಿಂಗ ಮೇಲ್ನೋಟಕ್ಕೆ ಸಂಕೇತವಾಗಿರಬಹುದು. ಆದರೆ ನಿಜಕ್ಕೂ ಅದು ದಾರ್ಶನಿಕ ದಿಗ್ವಿಜಯದ ಸಾಧನವಾಗಿದೆ ಎಂದು ಸಮ್ಮೇಳನಾಧ್ಯಕ್ಷೆ ಡಾ. ಮೀನಾಕ್ಷಿ ಬಾಳಿ ಅವರು ಹೇಳಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಮತ್ತು ಕದಳಿ ವೇದಿಕೆ ಇವುಗಳ ಆಶ್ರಯದಲ್ಲಿ ನಗರದ ಜೈಭವಾನಿ ಕನ್ವೆನ್ಶನ್ ಹಾಲ್ ನಲ್ಲಿ ಶನಿವಾರದಿಂದ ಆರಂಭವಾದ 12ನೇ ರಾಜ್ಯ ಮಟ್ಟದ ಕದಳಿ ಸಮಾವೇಶದಲ್ಲಿ ಸರ್ವಾಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಅವರು, ಜಾತಿ, ಬಡತನ, ಅಸಮಾನತೆಯ ಬಗ್ಗೆ ಮಾತನಾಡಿಲ್ಲ ಎಂಬ ಹುನ್ನಾರ ಇತ್ತೀಚಿಗೆ ನಡೆದಿದೆ ಎಂದು ಆಕ್ರೋಶ ಹೊರಹಾಕಿದರು.

ಕಲ್ಯಾಣದಲ್ಲಿ ಕ್ರಾಂತಿ ಆಗಿಲ್ಲರಲಿಕ್ಕಿಲ್ಲ. ಶಾಸನಗಳು ಹೊಟ್ಟೆ ತುಂಬಿದವರ ಸಾಹಿತ್ಯ. ಶರಣರು ಮೌಖಿಕವಾಗಿ ತಮ್ಮ ಪರಂಪರೆಯನ್ನು ಕಟ್ಟಿಕೊಂಡು ಬಂದಿದ್ದಾರೆ. ವೇದ, ಉಪನಿಷತ್ ಗಳನ್ನು ಶರಣರು ನಖಶಿಕಾಂತವಾಗಿ ಖಂಡಿಸಿದರು. ಅಂತೆಯೇ ವೈದಿಕರು ವಚನ ಸಾಹಿತ್ಯಕ್ಕೆ ನಡಗುತ್ತಾರೆ. ಈ ಬಗ್ಗೆ ನಾವು ಎಚ್ಚರ ವಹಿಸಬೇಕು ಎಂದು ಅವರು ತಿಳಿಸಿದರು.

ಸಕಲ ಜೀವಾತ್ಮರಿಗೆ ಲೇಸ ಬಯಸಿದ ಶರಣರು ವ್ಯಕ್ತಿಯನ್ನು ವಿರೋಧಿಸಲಿಲ್ಲ. ಸಮಾಜಕ್ಕೆ ಧಕ್ಕೆ ತರುವ ವಿಚಾರಗಳನ್ನು ವಿರೋಧಿಸಿದರು. ಶರಣರು ಸಮಾಜದ ಕಟ್ಟ ಕಡೆಯ ಮನುಷ್ಯನಿಗೆ ದಾರ್ಶನಿಕತೆಯನ್ನು ಒದಗಿಸಿದವರು ಎಂದು ಅವರು ಹೇಳಿದರು.

ಬ್ರಾಹ್ಮಣ್ಯವನ್ನು ಒದ್ದು, ವೈದಿಕತೆಯನ್ನು ವಿರೋಧಿಸಿದ ಬಸವಣ್ಣನವರು ಅನುಭವ ಪ್ರಮಾಣವನ್ನು ಒಪ್ಪಿದವರು. ಯಾವ ವೈದಿಕ ದರ್ಶನದಲ್ಲೂ ಮಹಿಳೆಯನ್ನು ಗುರು ಸ್ಥಾನದಲ್ಲಿ ನೋಡಿಲ್ಲ. ಕಾಯಕವನ್ನು ಕೈಲಾಸದೆತ್ತರದ ಸ್ಥಾನ ನೀಡಿದ ವಚನ ಸಾಹಿತ್ಯ ಹಾಳು ಮಾಡಲು ಆಗುವುದಿಲ್ಲ ಎಂದು ಅವರು ತಿಳಿಸಿದರು. ಇದೇ ವೇಳೆಯಲ್ಲಿ ಕಲ್ಯಾಣ ಕದಳಿ, ಅಕ್ಕ ಕೇಳವ್ವ ಎಂಬ ಎರಡು ಸ್ಮರಣ ಸಂಚಿಕೆ, ಶರಣ ಪ್ರಸಾದ, ಅರವತ್ಮೂರು ಪುರಾತನರ ಚಿತ್ರಪಟಗಳು ಕೃತಿಗಳು ಬಿಡುಗಡೆಯಾದವು.

# ಮಾಜಿ ಶಾಸಕರಿಗೆ ಪಂಥಾಹ್ವಾನ ನೀಡಿದ ಕಾಂಗ್ರೆಸ್ ಅಧ್ಯಕ್ಷ ಪೂಜಾರಿ

■ ಉದಯರಶ್ಮಿ ದಿನಪತ್ರಿಕೆ




ಸಿಂದಗಿ: ರಸ್ತೆಯ ಮೇಲೆ ಅನಧಿಕೃತವಾಗಿ ಶೆಡ್ಡುಗಳನ್ನು ನಿರ್ಮಿಸಿಕೊಳ್ಳುವ್ವದರಿಂದ ನಗರ ಸೌಂದರ್ಯೀಕರಣಕ್ಕೂ ಮಾರಕ, ಸರಾಗ ಸಂಚಾರಕ್ಕೂ ಅಡ್ಡಿ. ಅಲ್ಲದೇ ಪುರಸಭೆಯ ಬೊಕ್ಕಸಕ್ಕೂ ಅಪಾರ ಹಾನಿಯಾಗುತ್ತದೆ ಎಂದು ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಸುರೇಶ ಪೂಜಾರಿ ಹೇಳಿದರು. ಪಟ್ಟಣದ ಬ್ಲಾಕ್ ಕಾಂಗ್ರೆಸ್ ಕಾರ್ಯಾಲಯದಲ್ಲಿ ಹಮ್ಮಿಕೊಂಡ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಮಾಜಿ ಶಾಸಕರು ಅತಿಕ್ರಮಣದಿಂದ ತೆರವಾದ ಅಂಗಡಿಕಾರ-ರಿಗೆ ಪರಿಹಾರ ಹಾಗೂ ಪರ್ಯಾಯ ಸ್ಥಳದ ವ್ಯವಸ್ಥೆ ಮಾಡಬೇಕು ಎಂದು ಅಭಿಪ್ರಾಯ ಪಡುತ್ತಾರೆ. ಆದರೆ ಈ ಹಿಂದೆ ತಾಲೂಕು ಸಾರ್ವಜನಿಕ ಕ್ರೀಡಾಂಗಣವನ್ನು ನಿರ್ಮಿಸುವಾಗ ಅಲ್ಲಿ ವಾಸವಿದ್ದ ಸಾಕಷ್ಟು ಬಡ ಕುಟುಂಬಗಳ ವಸತಿಗಳನ್ನು ತೆರವುಗೊಳಿಸಲಾಯಿತು. ಆ ಸಂದರ್ಭದಲ್ಲಿ ವಿರೋಧ ಪಕ್ಷದವರು ಅಭಿವೃದ್ಧಿ ದೃಷ್ಟಿಯಿಂದ ವಿರೋಧ ವ್ಯಕ್ತಪಡಿಸಲಿಲ್ಲ. ಆಗ ನೀವೆಷ್ಟು ಕುಟುಂಬಗಳಿಗೆ ಪರ್ಯಾಯ ವ್ಯವಸ್ಥೆ ಹಾಗೂ ವಾಸಕ್ಕೆ ಸೂರುಗಳನ್ನು ಒದಗಿಸಿಕೊಟ್ಟಿದ್ದೀರಿ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು

ಮಾಜಿ ಶಾಸಕರ ಕಳೆದ 13ವರ್ಷಗಳ ಆಡಳಿತ ಅವಧಿಯಲ್ಲಿ ಮತಕ್ಷೇತ್ರದ್ಲಲಿ ಎಷ್ಟು ಅನುದಾನ ತಂದಿದ್ದಾರೆ, ಎಷ್ಟು ಅಭಿವೃದ್ಧಿ ಕಾರ್ಯಮಾಡಿದ್ದಾರೆ ಎನ್ನುವುದನ್ನು ಪುರಾವೆ ಸಹಿತ ಕೊಡಬೇಕು. ಈಗಿನ ಶಾಸಕರು 17 ತಿಂಗಳ ಅವಧಿಯಲ್ಲಿ ಎಷ್ಟು ಅಭಿವೃದ್ಧಿ ಕೆಲಸ ಮಾಡಿದ್ದಾರೆ ತಂದ ಅನುದಾನವೆಷ್ಟು ಎಂಬುದನ್ನು ನಾವು ಪುರಾವೆ ಸಹಿತ ಒದಗಿಸುತ್ತೇವೆ. ಇದೇ ಬಸವೇಶ್ವರ ವೃತ್ತದಲ್ಲಿ ಸಾರ್ವಜನಿಕ ವೇದಿಕೆ ನಿರ್ಮಿಸಿ ಅಭಿವೃದ್ಧಿ ಕೆಲಸಗಳ ತುಲನೆ ಹಾಗೂ ಚರ್ಚೆಯಾಗಬೇಕು. ಇದಕ್ಕೆ ಪಂಥಾಹ್ವಾನ ನೀಡುತ್ತಿದ್ದೇವೆ. ಇದನ್ನು ಮಾಜಿ ಶಾಸಕರು ಸ್ವೀಕರಿಸಬೇಕು ಎಂದು ಭೂಸನೂರ ಅವರಿಗೆ ಸವಾಲು ಹಾಕಿದರು.

ಈ ವೇಳೆ ಪುರಸಭೆ ಮಾಜಿ ಸದಸ್ಯ ರಾಜಶೇಖರ ಕೂಚಬಾಳ ಮಾತನಾಡಿ, ಅತಿಕ್ರಮಣ ಪುರಸಭೆಯ ನಿರ್ಧಾರ. ಇದಕ್ಕೆ ಕಾಂಗ್ರೆಸ್ ಪಕ್ಷದ ಒತ್ತಡ ಹಾಗೂ ಮುತುವರ್ಜಿಗಳೇನಿಲ್ಲ. ಸೌಂದರ್ಯೀಕರಣಕ್ಕೆ ಒತ್ತು ಕೊಟ್ಟಿರುವುದು ಸ್ವಾಗತಾರ್ಹ. ಅಭಿವೃದ್ಧಿ ಕಾರ್ಯದಲ್ಲಿ ಲೋಪವಿದ್ದರೆ ವಿರೋಧ ವ್ಯಕ್ತಪಡಿಸಿ. ಅದನ್ನು ಬಿಟ್ಟು ಯಾರದೋ ಹಿತಾಸಕ್ತಿಗಾಗಿ ವಿರೋಧವ್ಯಕ್ತಪಡಿಸಿದ್ದು ಬಾಲಿಶತನದಿಂದ ಕೂಡಿದ್ದು, 13ವರ್ಷಗಳ ಮಾಜಿ ಶಾಸಕರ ಅವಧಿಯಲ್ಲಿ ಆಲಮೇಲದಿಂದ ಸ್ವಗ್ರಾಮ ದೇವಣಗಾವದವರೆಗಿನ ನರಕ ಸದೃಶ್ಯವಾದ ರಸ್ತೆಯನ್ನು ನಿರ್ಮಾಣ ಮಾಡಲಾಗಲಿಲ್ಲ. ಅದನ್ನು ನವಚೇತನಗೊಳಿಸಲು ಮನಗೂಳಿ ಅವರೆ ಬರಬೇಕಾಯಿತು. ಒಂದು ವರ್ಷದ ಹಿಂದಿದ್ದ ಆಲಮೇಲ ಪಟ್ಟಣ ಈಗ ಹೇಗಾಗಿದೆ ಎಂಬುದನ್ನು ಮಾಜಿಯವರು ಅವಲೋಕನ ಮಾಡಿಕೊಳ್ಳಬೇಕು ಎಂದು ತಿವಿದರು. ಈ ವೇಳೆ ಮಹ್ಮದಪಟೇಲ್ ಬಿರಾದಾರ, ಸುರೇಶ ಮಳಲಿ ಮಾತನಾಡಿದರು. ಪತ್ರಿಕಾಗೋಷ್ಠಿಯಲ್ಲಿ ಕುಮಾರ ದೇಸಾಯಿ, ಸೋಮನಗೌಡ ಬಿರಾದಾರ, ಮಲ್ಲಣ್ಣ ಸಾಲಿ ಸೇರಿದಂತೆ ಅನೇಕರಿದ್ದರು.

"ಅಭಿವೃದ್ಧಿ ಕಾರ್ಯಮಾಡುವಾಗ ಪರ ವಿರೋಧಗಳೇನೇ ಇದ್ದರೂ ಕೆಲ ತ್ಯಾಗಕ್ಕೆ ಸಿದ್ದರಾಗಬೇಕಾಗುತ್ತದೆ. ಅನದಿಕೃತ ಶೆಡ್ಡುಗಳನ್ನು ನಿರ್ಮಿಸಿ ಹತ್ತಾರು ಸಾವಿರ ಬಾಡಿಗೆ ಪಡೆಯುವವರು ಬೀದಿ ವ್ಯಾಪಾರಿಗಳು ಹೇಗಾಗುತ್ತಾರೆ? ನಿಜಕ್ಕೂ ಕೆಲ ಸಂತ್ರಸ್ಥ-ರಿಗೆ ಹಾನಿ ಉಂಟಾಗಿದೆ. ಆದರೆ ಅವರಿಗೆ ಶಾಸಕರ ಕಡೆಯಿಂದ ಮುಂಬರುವ ದಿನಮಾನಗಳಲ್ಲಿ ನ್ಯಾಯ ಒದಗಿಸುವ ಕಾರ್ಯ ಮಾಡುತ್ತೇವೆ."

■ - ಎಂ.ಎ.ಖತೀಬ
ಕಾಂಗ್ರೆಸ್ ಮುಖಂಡರು

ಬಸವನ ಅಗಲಿಕೆಗೆ ಕಂಬನಿಯ ಅಶ್ರುದರ್ಪಣ । ಶ್ರೀಗಳು, ರೈತರ ಸಮ್ಮುಖದಲ್ಲಿ ಗೌರವಯುತ ಅಂತಿಮ ಸಂಸ್ಕಾರ

# ಮಾದರಿಯಾದ ಪಾಲಭಾವಿ ಕುಟುಂಬದ ಪಶುಪ್ರೇಮ

■ ಉದಯರಶ್ಮಿ ದಿನಪತ್ರಿಕೆ

■ - ಇಲಾಹಿ ಇ. ಜಮಖಂಡಿ



ಚಿಮ್ಮಡ: ಬಹುತೇಕ ರೈತರು ತಮ್ಮ ಕೃಷಿ ಕಾಯಕಗಳಿಗೆ ಬೆನ್ನೆಲುಬಾಗಿ ದುಡಿಯುವ ಆಕಳು, ಎಮ್ಮೆ, ಎತ್ತುಗಳು ದುಡಿಯಲು ಅಸಹಾಯಕ ಸ್ಥಿತಿ ತಲುಪಿದಾಗ ಅವುಗಳನ್ನು ಕಸಾಯಿಖಾನೆಗೋ ಅಥವಾ ಗೋಶಾಲೆಗೋ ಸಾಗಿಸಿ ಕೈತೊಳೆದುಕೊಂಡು ಬಿಡುತ್ತಾರೆ ಆದರೆ ಬಾಗಲಕೋಟೆ ಜಿಲ್ಲೆಯ ರಬಕವಿ-ಬನಹಟ್ಟಿ ತಾಲೂಕಿನ ಚಿಮ್ಮಡ ಗ್ರಾಮದ ರೈತ ಪರಪ್ಪಾ ರಾಮಪ್ಪಾ ಪಾಲಭಾವಿಯವರು ನಿಸ್ಸಹಾಯಕ ಆಕಳು, ಎತ್ತುಗಳನ್ನು ಮನೆಯ ಸದಸ್ಯರಂತೆ ಸಾಕಿ, ಸಲಹಿ ಅವು ಅಗಲಿದಾಗ ಗೌರವಯುತವಾಗಿ ಅಂತಿಮ ಸಂಸ್ಕಾರ ನೆರವೇರಿಸುವ ಮೂಲಕ ಇತರ ರೈತರಿಗೆ ಮಾದರಿಯಾಗಿದ್ದಾರೆ.

ಸುಮಾರು ಇಪ್ಪತ್ನಾಲ್ಕು ವರ್ಷಗಳ ಹಿಂದೆ ಖರೀದಿಸಿದ ಎತ್ತೊಂದು ಗುರುವಾರ ಸಂಜೆ ವಯೋಸಹಜ ಅಸುನೀಗಿದಾಗ ತಮ್ಮ ಬಾಗದ ರೈತರಿಗೆಲ್ಲ ಕರೆ ಮೂಲಕ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಆಹ್ವಾನ ನೀಡಿ ಶ್ರೀ ಪ್ರಭು ಮಹಾಸ್ವಾಮಿಜಿ, ಶ್ರೀ ಜನಾರ್ಧನ ಮಹಾರಾಜರು ಹಾಗೂ ನೂರಾರು ಜನ ರೈತರ ಸಮ್ಮುಖದಲ್ಲಿ ಗೌರವಯುತವಾಗಿ ಅಂತ್ಯ ಸಂಸ್ಕಾರ ನಡೆಸಿದರು. ಅಗಲಿದ ಬಸವನಿಗೆ ತಮ್ಮ ಮನೆಯ ಹಿರಿಯರ ಸ್ಥಾನಮಾನ ನೀಡಿದ್ದ ಪಾಲಭಾವಿ ದಂಪತಿಗಳು ಈ ಹಿರಿ ಎತ್ತನ್ನು ಮನೆಯ ಸದಸ್ಯರಂತೆಯೇ ಪ್ರೀತಿಯಿಂದ ಸಲಹುತಿದ್ದರು, ಈಗಾಗಲೇ ಐದು ಹಿರಿ ಎತ್ತುಗಳ ಸಮಾಧಿಗಳು ಪಾಲಭಾವಿ ದಂಪತಿಗಳ ಮನೆಯ ಆವರಣದಲ್ಲಿದ್ದು ಪ್ರತೀವರ್ಷ ಬಸವ ಜಯಂತಿಯಂದು ಎಲ್ಲ ಸಮಾಧಿಗಳಿಗೆ ವಿಶೇಷ ಪೂಜೆ ಹಾಗೂ ಪ್ರಸಾದ ವ್ಯವಸ್ಥೆ ಮಾಡಿಸುವ ಮೂಲಕ ತಮ್ಮಲ್ಲಿ ಒಬ್ಬರಾಗಿ ದುಡಿದ ಮೂಕಪ್ರಾಣಗಳಿಗೆ ಗೌರವ ತೋರುತಿದ್ದಾರೆ.

ತಂದೆಯ ಕಾಲದಿಂದಲೂ ಇದುವರೆಗೆ ಯಾವುದೇ ಆಕಳು, ಎತ್ತುಗಳನ್ನು ಕಸಾಯಿಖಾನೆ, ಗೋಶಾಲೆಗಳಿಗೆ ನೀಡಿದರೆ ಮನೆಯ ಸದಸ್ಯರನ್ನು ವೃದ್ದಾಶ್ರಮಕ್ಕೆ ಸೇರಿಸಿದಂತಾಗುತ್ತದೆ ಎಂಬ ಭಾವನೆ ಹೊಂದಿರುವ ಪರಪ್ಪಾ ಪಾಲಭಾವಿಯವರು ತಮ್ಮ ಮಕ್ಕಳಿಗೂ ಈ ಪರಂಪರೆ ಮುಂದುವರಿಸುವಂತೆ ಸಲಹೆ ನೀಡಿದ್ದಾಗಿ ತಿಳಿಸಿದ್ದಾರೆ.

"ಇಪ್ಪತ್ತರಿಂದ ಮೂವತ್ತು ವರ್ಷಗಳ ಕಾಲ ನಮ್ಮೊಂದಿಗೆ ಜೊತೆಯಾಗಿ ದುಡಿದು ನಮಗೆ ಅನ್ನ, ಆಶೀರ್ವಾದ ನೀಡಿದ ಮೂಕ ಪ್ರಾಣಿಗಳನ್ನು ಅವು ದುಡಿಯುವುದನ್ನು ನಿಲ್ಲಿಸಿವೆ ಎಂಬ ಒಂದೇ ಕಾರಣಕ್ಕಾಗಿ ನಾವು ಅವುಗಳನ್ನು ಅಗಲಿಸಿದರೆ, ಹಣಕ್ಕಾಗಿ ಕಸಾಯಿಖಾನೆಗೆ ಮಾರಾಟ ಮಾಡಿದರೆ ನಮ್ಮಂಥ ಕಠೋರ ಹೃದಯದವರು ಯಾರಿದ್ದಾರೆ? ಬಸವನನ್ನು ದೇವರೆಂದು ಭಾವಿಸಿ ಪೂಜಿಸುವ ನಾವು, ಅವುಗಳನ್ನು ಬದುಕಿರುವವರೆಗೂ ಸಾಕದಿದ್ದರೆ ಇದು ನಮ್ಮ ರೈತ ಕುಲಕ್ಕೆ ಅವಮಾನಕಾರಿ, ದೇಶದ ಸಂಸ್ಕೃತಿಗೇ ವಿರುದ್ಧವಾದದ್ದು."

■ - ಪರಪ್ಪಾ ರಾಮಪ್ಪಾ ಪಾಲಭಾವಿ
ಪ್ರಗತಿಪರ ರೈತರು, ಚಿಮ್ಮಡ

# ಬಹಿರಂಗ ಸೌಂದರ್ಯದೊಂದಿಗೆ ಅಂತರಂಗದ ಆನಂದ ಅನುಭವಿಸಿ: ಪ್ರೇಮಕ್ಕ ಅಂಗಡಿ



ಕಲಬುರಗಿ:ಬಹಿರಂಗದ ಸೌಂದರ್ಯಕ್ಕಾಗಿ ಸೀರೆ, ಆಭರಣ ಎಷ್ಟು ಮುಖ್ಯವೋ ಅಂತರಂಗದ ಆನಂದವು ಸಹ ಅಷ್ಟೇ ಮುಖ್ಯ ಎಂದು ಬೆಳಗಾಂವಿಯ ಪ್ರೇಮಕ್ಕ ಅಂಗಡಿ ಅವರು ಹೇಳಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್, ಕದಳಿ ಮಹಿಳಾ ವೇದಿಕೆ ವತಿಯಿಂದ ನಗರದ ಜೈಭವಾನಿ ಕನ್ವೆನ್ಷನ್ ಹಾಲನಲ್ಲಿ ಶನಿವಾರದಿಂದ ಆರಂಭಗೊಂಡ 12ನೇ ರಾಜ್ಯ ಮಟ್ಟದ ಕದಳಿ ಮಹಿಳಾ ಸಮಾವೇಶದಲ್ಲಿ 'ಕದಳಿ ಮಹಿಳಾ ವೇದಿಕೆ ಸಂಘಟನೆ ಮತ್ತು ಸವಾಲುಗಳು ವಿಷಯ ಕುರಿತು ವಿಶೇಷ ಉಪನ್ಯಾಸ ನೀಡಿದ ಅವರು, ಸಂಘಟನೆಯಿಂದ ಏನು ಲಾಭ ಎನ್ನುವುದಕ್ಕಿಂತ ಮಹಿಳೆಯಾಗಿ ನಾವೆಷ್ಟು ಸಾರ್ಥಕವಾಗಿದ್ದೇವೆ ಎಂಬುದರ ಬಗ್ಗೆ ಆತ್ಮಾವಲೋಕನ ಅಗತ್ಯ ಎಂದು ತಿಳಿಸಿದರು.ಅಕ್ಕ ಕೌಶಿಕನ ಮುಖಕ್ಕೆ ಎಸೆದ ದಿನ, ಬಂಗಾರದ ಒಡವೆಯನ್ನು ಕಸದಲ್ಲಿ ದಬ್ಬಿದ ಸತ್ಯಕ್ಕ ಮುಂತಾದವರು ನಮಗೆ ವಾರಸುದಾರರಾಗಬೇಕು ಎಂದು ಹೇಳಿದ ಅವರು, ಹೆಣ್ತನದ ಕಹಳೆ ಊದುವುದು ನಮ್ಮೆದುರಿಗಿರುವ ಸವಾಲು ಎಂದು ತಿಳಿಸಿದರು.ರಾಯಚೂರಿನ ಸರ್ವ ಮಂಗಳಾ ಸಕ್ರಿ, ಡಾ. ಫರ್ವಿನ್ ಸುಲ್ತಾನ್, ಡಾ. ಮೀನಾಕ್ಷಿ ಬಾಳಿ ಮುಂತಾದವರು ಉಪಸ್ಥಿತರಿದ್ದರು. ಮೈಸೂರಿನ ಎಚ್.ಟಿ. ಶೈಲಜಾ ಅವರು ಅಧ್ಯಕ್ಷತೆ ವಹಿಸಿದ್ದರು. ಡಾ. ಶಿವಶರಣಪ್ಪ ಮೋತಕಪಲ್ಲಿ ಅವರು ಕಾರ್ಯಕ್ರಮ ನಿರೂಪಿಸಿದರು. ಡಾ. ಚಿತ್ಕಳಾ ಮಠಪತಿ ಅವರು ಸ್ವಾಗತಿಸಿದರು. ಶರಣಗೌಡ ಪಾಟೀಲ್ ಪಾಳಾ ಅವರು ವಂದಿಸಿದರು.

# ಜೈಲಿನೊಳಗೆ ಚೆಂಡು ಮಾದರಿಯಲ್ಲಿ ಮೊಬೈಲ್, ಗಾಂಜಾ ಎಸೆದಿದ್ದ ನಾಲ್ವರು ಆರೋಪಿಗಳ ಬಂಧನ



ಕಲಬುರಗಿ: ನಗರ ಹೊರವಲಯದಲ್ಲಿರುವ ಕೇಂದ್ರ ಕಾರಾಗೃಹದ ಮುಖ್ಯ ಒಳಗೋಡೆ ಬಳಿ ಚೆಂಡು ಮಾದರಿಯಲ್ಲಿ ಮೊಬೈಲ್, ಗಾಂಜಾ ಎಸೆದಿದ್ದ ಎರಡು ಪ್ರಕರಣಗಳಿಗೆ ಸಂಬಂಧಿಸಿದಂತೆ ನಾಲ್ವರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ನಗರ ಪೊಲೀಸ್ ಆಯುಕ್ತ ಡಾ.ಶರಣಪ್ಪ ಎಸ್.ಡಿ.ತಿಳಿಸಿದರು.

ಪೊಲೀಸ್ ಆಯುಕ್ತರ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಈ ಎರಡೂ ಪ್ರಕರಣಗಳಿಗೆ ಸಂಬಧಿಸಿದಂತೆ ಇಂದಿರಾ ನಗರದ ಲೋಕೇಶ ತಂದೆ ಸುಭಾಷ ಸಿಂಧೆ (24) (ವಿದ್ಯಾರ್ಥಿ) ಉದಯಕುಮಾರ ತಂದೆ ತಿಪ್ಪಣ್ಣ ದೊಡ್ಡಮನಿ (29), ನೂರಾನಿ ಮೊಹಲ್ಲಾದ ಮುಬಾರಕ್ ಅಲಿ ತಂದೆ ಅಬ್ಬಾಸ್ ಅಲಿ, ಸಾಜೀದ್ ಖಾನ್ ತಂದೆ ಅಬ್ದುಲ್ ಸತ್ತಾರ್ ಎಂಬುವವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ತಿಳಸಿದರು.

ಕಾರಾಗೃಹದ ಮುಖ್ಯ ಒಳಗೋಡೆ ಬಳಿ ಚೆಂಡು ಮಾದರಿಯಲ್ಲಿ ಮೊಬೈಲ್, ಗಾಂಜಾ ಎಸೆದ ಪ್ರಕರಣಗಳಿಗೆ ಸಂಬಂಧಿಸಿದಂತೆ ಫರಹತಾಬಾದ ಪೊಲೀಸ್ ಠಾಣೆಯಲ್ಲಿ ಪ್ರತ್ಯೇಕ ಪ್ರಕರಣ ದಾಖಲಾಗಿದ್ದವು. ಈ ಪ್ರಕರಣಗಳ ಪತ್ತೆಗೆ ಡಿಸಿಪಿ ಕನಿಕಾ ಸಿಕ್ರಿವಾಲ್, ಎಸಿಪಿಗಳಾದ ಪ್ರವೀಣ್ ಹೆಚ್.ನಾಯಕ್, ಡಿ.ಜಿ.ರಾಜಣ್ಣ ಅವರ ಮಾರ್ಗದರ್ಶನದಲ್ಲಿ ಫರಹತಾಬಾದ ಪೊಲೀಸ್ ಠಾಣೆಯ ಪಿಐ ಮಲ್ಲಿಕಾರ್ಜುನ ಇಕ್ಕಳಕಿ ನೇತೃತ್ವದಲ್ಲಿ ಸಿಬ್ಬಂದಿಗಳಾದ ಗಡ್ಡೆಪ್ಪ, ಸಾಜೀದ್ ಪಾಶಾ, ಆನಂದ ಅವರನ್ನೊಳಗೊಂಡ ತಂಡ ರಚಿಸಲಾಗಿತ್ತು. ಈ ತಂಡ ತನಿಖೆ ನಡೆಸಿ ನಾಲ್ವರು ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಲ್ಲಿ ಯಶಸ್ವಿಯಾಗಿದೆ ಎಂದು ತಿಳಸಿದರು.

ಕಾರಾಗೃಹದ ಮುಖ್ಯ ಒಳಗೋಡೆ ಬಳಿ ಮೊಬೈಲ್ ಮತ್ತು ಗಾಂಜಾ ಎಸೆದ ಪ್ರಕರಣಗಳಲ್ಲಿ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸುವಲ್ಲಿ ಯಶಸ್ವಿಯಾಗಿರುವ ಪೊಲೀಸ್ ಅಧಿಕಾರಿಗಳು ಮತ್ತು ಸಿಬ್ಬಂದಿ ಕಾರ್ಯವನ್ನು ಅವರು ಶ್ಲಾಘಿಸಿದರು.

ಡಿಸಿಪಿ ಕನಿಕಾ ಸಿಕ್ರಿವಾಲ್ ಸುದ್ದಿಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

# ಭಗತ್ ಸಿಂಗ್ ಸಂಘರ್ಷ ಭರಿತ ಹೋರಾಟ ಇಂದಿನ ವಿದ್ಯಾರ್ಥಿ ಯುವಕರಿಗೆ ಸ್ಫೂರ್ತಿ



ಕಲಬುರಗಿ: ವಿದ್ಯಾರ್ಥಿ ದೆಸೆಯಿಂದಲೇ ಸ್ವಾತಂತ್ರ್ಯ ಹೋರಾಟದ ಕನಸನ್ನು ಹೊತ್ತು ಹೋರಾಟದಲ್ಲಿ ಧುಮುಕಿದ ಮಹಾನ್ ಕ್ರಾಂತಿಕಾರಿ ಭಗತ್ ಸಿಂಗ್ ಅವರು ಸಮ ಸಮಾಜದ ಕನಸನ್ನು ಕಾಣುತ್ತಾ ಜಾತಿ ಧರ್ಮಗಳ ಗಡಿಯನ್ನು ಮೀರಿ ಭಾರತವೆಂಬ ಒಂದೇ ಸೂರಡಿಯಲ್ಲಿ ಎಲ್ಲರೂ ನೆಮ್ಮದಿಯಿಂದ ಬದುಕುವಂತಾಗಬೇಕೆಂದು ಬ್ರಿಟಿಷ್ ಸಾಮ್ರಾಜ್ಯ ಶಾಹಿಗಳ ವಿರುದ್ಧ ರಾಜೀ ರಹಿತ ಹೋರಾಟ ನಡೆಸಿದರು. ಎಳೆಯ ವಯಸ್ಸಿನಲ್ಲಿ ನಗುನಗುತ ಕಲ್ಲುಗಂಬವನ್ನೇರಿ, ದೇಶಕ್ಕಾಗಿ ತಮ್ಮ ಜೀವ ತ್ಯಾಗ ಮಾಡಿ, ಇಂದಿಗೂ ವಿದ್ಯಾರ್ಥಿ ಯುವಕರ ಮನಸ್ಸಿನಲ್ಲಿ ಅಚ್ಚಳಿಯದೆ ಉಳಿದಿದ್ದಾರೆ ಎಐಡಿಎಓ ರಾಜ್ಯ ಉಪಾಧ್ಯಕ್ಷರಾದ ದಿವಾಕರ ಹೇಳಿದರು.

ಎಐಡಿಎಓ ಜಿಲ್ಲಾ ಸಮಿತಿ ವತಿಯಿಂದ ನಗರದ ಸರ್ಕಾರಿ ಸ್ವಾಯತ್ತ ಪದವಿ ಮಹಾವಿದ್ಯಾಲಯದಲ್ಲಿ ಭಗತ್ ಸಿಂರ 117ನೇ ಜನ್ಮ ವಾರ್ಷಿಕ ಹಿನ್ನೆಲೆಯಲ್ಲಿ ಆಯೋಜಿಸಿದ್ದ ಅವರ ಜೀವನ ಸಂಘರ್ಷದ ಕುರಿತು ವಿಚಾರ ಸಂಕಿರಣದಲ್ಲಿ ಮಾತನಾಡಿದ ಅವರು, ಈ ಮಹಾನ್ ಕ್ರಾಂತಿಕಾರಿಯ ಸಂಘರ್ಷ ಭರಿತ ಹೋರಾಟದಿಂದ ಹಾಗೂ ಅವರ ವಿಚಾರಗಳಿಂದ ಸ್ಫೂರ್ತಿಗೊಂಡು ಅವರು ಕಂಡಂತಹ ಮಾನವನಿಂದ ಮಾನವನ ಶೋಷಣೆಯನ್ನು ಕೊನೆಗಾಣಿಸಿ ಸಮ ಸಮಾಜವನ್ನು ಕಟ್ಟಲು ವಿದ್ಯಾರ್ಥಿ ಯುವಕರು ಮುಂದೆ ಬರಬೇಕಾಗಿದೆ ಎಂದು ಕರೆ ನೀಡಿದರು.

ಈ ಸಂದರ್ಭದಲ್ಲಿ ಕಾಲೇಜಿನ ಅರ್ಥಶಾಸ್ತ್ರ ವಿಷಯದ ಪ್ರಾಧ್ಯಾಪಕರಾದ ಡಾ.ಸುರೇಶ್ ಎಸ್ ಮೊಳೆಗಾಂವ್ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಎಐಡಿಎಓ ಜಿಲ್ಲಾ ಕಾರ್ಯದರ್ಶಿ ತುಳಜರಾಮ ಎನ್ ಕೆ ನಿರೂಪಿಸಿ ವಂದಿಸಿದರು. ಎಐಡಿಎಓ ಜಿಲ್ಲಾ ಖಜಾಂಚಿ ವೆಂಕಟೇಶ್ ದೇವದುರ್ಗ, ಸದಸ್ಯರಾದ ರಾಹುಲ್ ಜಾದವ್, ಸ್ಫೂರ್ತಿ, ಸಿದ್ದಾರ್ಥ್ ತಿಪನೋರ್, ಯುವರಾಜ ವಿದ್ಯಾರ್ಥಿಗಳಾದ ಭೀಮಾಶಂಕರ, ಅಭಿಷೇಕ್, ನಾಗರಾಜ, ಸಂದೀಪ್ ಮತ್ತು ನೂರಾರು ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಜೀವನದಲ್ಲಿ ಒಳ್ಳೆಯ ಗುರಿ ಇಟ್ಟುಕೊಳ್ಳಿ : ಪ್ರೊ.ಜೈಕೀಶನ್ ಠಾಕೂರ



ಕಲಬುರಗಿ: ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ದಿನಾಲು ಕಾಲೇಜಿಗೆ ಬಂದು ಅಧ್ಯಯನ ಮತ್ತು ಅಧ್ಯಾಪನ ಮಾಡಬೇಕು. ವಿದ್ಯಾರ್ಥಿಗಳೇ ಕಾಲೇಜಿನ ಸ್ಥಂಭಗಳು. ತಂದೆ-ತಾಯಿಗಳ ಪರಿಶ್ರಮ ಹಾಳು ಮಾಡದೇ ಜೀವನದಲ್ಲಿ ಒಳ್ಳೆಯ ಗುರಿ ಇಟ್ಟುಕೊಳ್ಳಬೇಕು. ಕಾಲೇಜು ಒಳ್ಳೆಯ ಪರಿಸರ ವಾತಾವರಣದಲ್ಲಿದೆ ವಿವಿಧ ಘಟಕಗಳಾದ ಸಾಂಸ್ಕೃತಿಕ, ಎನ್‌ಎಸ್‌ಎಸ್, ರೋವರ್ಸ್ ಮತ್ತು ರೇಂಜರ್ಸ್, ರೆಡ್ ಕ್ರಾಸ್, ಹೀಗೆ ವಿವಿಧ ಘಟಕಗಳು ವಿದ್ಯಾರ್ಥಿಗಳಲ್ಲಿ ಒಳ್ಳೆಯ ವ್ಯಕ್ತಿತ್ವವನ್ನು ರೂಪಿಸುತ್ತದೆ. ಮುಂದಿನ ದಿನಗಳಲ್ಲಿ ದೇಶ ಕಟ್ಟುವ ನಾಯಕರಾಗಿ ಹೊರಹೊಮ್ಮಬೇಕು ಎಂದು ಗುಂಡುಪಲ್ಲಿ ಸರಕಾರಿ ಪ್ರಥಮ ದರ್ಜೆ (ವಸತಿ) ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಜೈಕಿಶನ್ ಠಾಕೂರ್ ಹೇಳಿದರು.

ಫರಹತಾಬಾದ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಹಮ್ಮಿಕೊಂಡಿದ್ದ 2024–25ನೇ ಸಾಲಿನ ವಿವಿಧ ಘಟಕಗಳ ಉದ್ಘಾಟನಾ ಸಮಾರಂಭ ಹಾಗೂ ಬಿಎ ಪ್ರಥಮ ವರ್ಷದ ವಿದ್ಯಾರ್ಥಿಗಳಿಗೆ ಆಯೋಜಿಸಿದ್ದ ಸ್ವಾಗತ ಸಮಾರಂಭದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ ಕಾಲೇಜಿನ ಪ್ರಾಂಶುಪಾಲರಾದ ಡಾ. ಇಂದುಮತಿ ಪಿ ಪಾಟೀಲ ಅವರು ಮಾತನಾಡುತ್ತ, ಚರಿತ್ರೆಯ ಪುಟಗಳಲ್ಲಿ ಸಾಧನೆ ಮಾಡಿದ ಸಾಧಕರನ್ನು ಅಧ್ಯಯನ ಮಾಡಿ ಜ್ಞಾನದ ಶಿಖರವನ್ನು ಹೆಚ್ಚಿಸುಕೊಳ್ಳಬೇಕು. ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳು ಸ್ಪರ್ಧಾತ್ಮಕ ಮನೋಭಾವನೆಯನ್ನು ಮೈಗೂಡಿಸಿಕೊಂಡು ಕಾಲೇಜಿನ ಕೀರ್ತಿಯನ್ನು ಹೆಚ್ಚಿಸಬೇಕು ಎಂದರು. ಕಾಲೇಜಿನ ಸಾಂಸ್ಕೃತಿಕ ಘಟಕಗಳ ಸಂಚಾಲಕರಾದ ಡಾ.ಶಶಿಕಾಂತ ಎಸ್. ಪಾಟೀಲರು ಪ್ರಾಸ್ತಾವಿಕ ಮಾತನಾಡಿದರು. ಪ್ರಥಮ ಸೆಮಿಸ್ಟರ ವಿದ್ಯಾರ್ಥಿಗಳಿಗೆ ಹೂಗುಚ್ಛ ಕೊಡುವ ಮೂಲಕ ಸ್ವಾಗತ ಮಾಡಿದರು.

# ವಚನ ಸಾಹಿತ್ಯವನ್ನು ಮುಂದಿನ ಪೀಳಿಗೆಗೆ ಮುಟ್ಟಿಸುವ ಕೆಲಸ ಆಗಬೇಕು: ಡಾ. ಶರಣಪ್ರಕಾಶ್ ಪಾಟೀಲ್



ಕಲಬುರಗಿ: ವಚನ ಸಾಹಿತ್ಯವನ್ನು ಮುಂದಿನ ಪೀಳಿಗೆಗೆ ಮುಟ್ಟಿಸುವ ಕೆಲಸ ಆಗಬೇಕು ಎಂದು ರಾಜ್ಯದ ವೈದ್ಯಕೀಯ ಶಿಕ್ಷಣ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಅವರು ಹೇಳಿದರು.

ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ ಮತ್ತು ಕದಳಿ ವೇದಿಕೆ ಇವುಗಳ ಆಶ್ರಯದಲ್ಲಿ ನಗರದ ಜೈಭವಾನಿ ಕನ್ವೆನ್ಷನ್ ಹಾಲ್ ನಲ್ಲಿ ಶನಿವಾರದಿಂದ ಆರಂಭವಾದ 12ನೇ ರಾಜ್ಯ ಮಟ್ಟದ ಕದಳಿ ಸಮಾವೇಶದಲ್ಲಿ ಶರಣ ದರ್ಶನ ಚಿತ್ರಕಲಾ ಪ್ರದರ್ಶನ ಮತ್ತು ಪುಸ್ತಕಗಳ ಮಳಿಗೆಗಳ ಉದ್ಘಾಟಿಸಿ ಮಾತನಾಡಿದ ಅವರು, ವಚನ ಸಾಹಿತ್ಯದ ಬಗ್ಗೆ ಮುಂದಿನ ಪೀಳಿಗೆಗೆ ಅರಿವು ಮೂಡಿಸುವ ಅಗತ್ಯವಿದೆ ಎಂದರು.

ವಚನ ಸಾಹಿತ್ಯದಲ್ಲಿ ಬಹಳ ದೊಡ್ಡ ಶಕ್ತಿಯಿದೆ. ಶರಣರ ವಚನಗಳು ಪಚನವಾದಾಗ ಮತ್ತು ಆ ತತ್ವಗಳನ್ನು ಜೀವನದಲ್ಲಿ ಅಳವಡಿಸಿಕೊಂಡಾಗ ಮಾತ್ರ ಬದುಕು ಯಶಸ್ವಿಯಾಗುತ್ತದೆ. ಲಿಂಗ ಕಟ್ಟಿಕೊಳ್ಳುವ, ಲಿಂಗಪೂಜೆ ಮಾಡುವ ಸಂಸ್ಕೃತಿ ಮಕ್ಕಳಲ್ಲಿ ಬೆಳೆಸಬೇಕು. ಅನುಭವ ಮಂಟಪದಲ್ಲಿ ಅಕ್ಕನಿಗೆ ವಿಶೇಷ ಸ್ಥಾನವಿತ್ತು ಎಂದು ಅವರು ಹೇಳಿದರು.

ಇದಕ್ಕೂ ಮುನ್ನ ಸಮಾವೇಶವನ್ನು ಉದ್ಘಾಟಿಸಿದ ಶರಣಬಸವೇಶ್ವರ ಸಂಸ್ಥಾನದ ಚೇರ್ ಪರ್ಸ ನ್ ಡಾ. ದಾಕ್ಷಾಯಿಣಿ ಎಸ್. ಅಪ್ಪ ಅವರು ಮಾತನಾಡಿ, 12ನೇ ಶತಮಾನದ ಅಕ್ಕಮಹಾದೇವಿ ಮಹಿಳೆಯರ ಸ್ವಾತಂತ್ರ್ಯದ ಪ್ರತೀಕವಾಗಿದ್ದಾರೆ. ಶರಣಬಸವೇಶ್ವರ್ ಸಂಸ್ಥಾನದ ದೊಡ್ಡಪ್ಪ ಅಪ್ಪ ಅವರು, ಮಹಿಳೆಯರಿಗೆ ಮೊದಲು ಶಿಕ್ಷಣ ಒದಗಿಸಿದವರು. ಹಿಂದಣ ಹೆಜ್ಜೆ ಅರಿತಲ್ಲದೆ ಮುಂದಣ ಹೆಜ್ಜೆ ಅರಿಯಲಾಗದು ಎನ್ನುವಂತೆ ಅಕ್ಕನ ವ್ಯಕ್ತಿತ್ವ ಮಹಿಳೆಯರಿಗೆ ಮಾದರಿಯಾಗಿದೆ. ಶರಣಬಸವೇಶ್ವರರು, ಖ್ವಾಜಾ ಬಂದೇನವಾಜರ ಸಾಮರಸ್ಯದ ಬೀಡು ಇದಾಗಿದೆ. ಅನುಭವ ಮಂಟಪ, ಕಲ್ಯಾಣ ರಾಜ್ಯದ ಕನಸು ನನಸು ಮಾಡುವ ಕೆಲಸವನ್ನು ನಾವೆಲ್ಲರೂ ಮಾಡಬೇಕಾಗಿದೆ ಎಂದರು.

ಮುಖ್ಯ ಅತಿಥಿಗಳಾದ ರಾಜ್ಯ ವಿಧಾನ ಪರಿಷತ್ ಸದಸ್ಯ ಡಾ. ಬಿ.ಜಿ. ಪಾಟೀಲ್ ಅವರು ಮಾತನಾಡಿ, ವಚನ ಸಾಹಿತ್ಯ ಬಹಳ ಶ್ರೀಮಂತ ಸಾಹಿತ್ಯವಾಗಿದೆ. 33ಕ್ಕೂ ಹೆಚ್ಚು ವಚನಕಾರ್ತಿಯರು ವಚನ ರಚಿಸಿದ್ದು ಗಮನಾರ್ಹ ಸಂಗತಿ ಎಂದು ತಿಳಿಸಿದರು. ನಿಕಟಪೂರ್ವ ಅಧ್ಯಕ್ಷೆ ಶಶಿಕಲಾ ವಸ್ತ್ರದ್ ಅವರು ಮಾತನಾಡಿ, ಶರಣರ ವಚನಗಳ ಪ್ರಚಾರ ಮತ್ತು ಪ್ರಚುರಪಡಿಸುವ ಕೆಲಸ ಈಗಾಗಲೇ ಆಗಿದೆ. ಆದರೆ ಆ ವಚನಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು. ಶರಣ–ಶರಣೆಯರು ಅನುಭವ ಮಂಟಪದಲ್ಲಿ ಅಂದು ಸಾಮಾಜಿಕ ಪ್ರಜ್ಞೆ ಕುರಿತು ಮಾತನಾಡಿದರು. ಸಾಮಾನ್ಯ ಜನರಿಗೆ ತಿಳಿಯುವಂತೆ ಹೇಳಿದರು ಎಂದರು.

ವಚನಕಾರರು ವರ್ಗ, ವರ್ಣ ಹಾಗೂ ಲಿಂಗಭೇದ ಕುರಿತು ಮಾತನಾಡಿದರು ಮಾತ್ರವಲ್ಲ ಸರ್ವ ಸಮಾನತೆಯ ಸಮಾಜ ಕಟ್ಟಲು ಅಹರ್ನಿಶಿ ಪ್ರಯತ್ನಿಸಿದರು ಎಂದು ಅವರು ತಿಳಿಸಿದರು. ಗದಗಿನ ಜಗದ್ಗುರು ಡಾ. ತೋಂಟದ ಸಿದ್ಧರಾಮ್ ಮಹಾಸ್ವಾಮಿಗಳು, ಸಾರಂಗಮಠ, ಶ್ರೀಶೈಲಂನ ಜಗದ್ಗುರು ಡಾ. ಸಾರಂಗಧರ್ ದೇಶಿಕೇಂದ್ರ ಸ್ವಾಮೀಜಿ, ಭಾಲ್ಕಿ ಹಿರೇಮಠದ ನಾಡೋಜ್ ಡಾ. ಬಸವಲಿಂಗ ಪಟ್ಟದ್ದೇವರು ಸಾನಿಧ್ಯ ವಹಿಸಿದ್ದರು. ಸಂಸದ ರಾಧಾಕೃಷ್ಣ ದೊಡ್ಡಮನಿ ಅವರು ವಚನಗಳ ಕಟ್ಟು, ಅಕ್ಕಮಹಾದೇವಿ ಭಾವಚಿತ್ರ ಮೆರವಣಿಗೆಯನ್ನು ಉದ್ಘಾಟಿಸಿದರು.

ಪರಿಷತ್ ರಾಷ್ಟ್ರೀಯ ಅಧ್ಯಕ್ಷ ಡಾ. ಸಿ. ಸೋಮಶೇಖರ್ ಅವರು ಆಶಯ ನುಡಿಗಳನ್ನಾಡಿ, ಕಂಗಳ ಮುಂದಿನ ಕತ್ತಲೆ ನಿವಾರಿಸುವ, ಸಾಮರಸ್ಯದ ಬದುಕು ಕಟ್ಟಿಕೊಡುವ ಶರಣ ಪಥ–ದಲ್ಲಿ ಸಾಗಲು. ವಚನ ಸಂವಿಧಾನ, ಜೀವನ ಸಂವಿಧಾನವಾಗಬೇಕು ಎಂದರು. ಶಾಸಕರಾದ ಅಲ್ಲಮಪ್ರಭು ಪಾಟೀಲ್, ಎಂ.ವೈ. ಪಾಟೀಲ್, ಮಾಜಿ ಸಚಿವೆ ಲೀಲಾದೇವಿ ಆರ್. ಪ್ರಸಾದ್, ಬಸವ ಸಮಿತಿ ಅಧ್ಯಕ್ಷೆ ಡಾ. ವಿಲಾಸವತಿ ಖೂಬಾ, ನಿಕಟಪೂರ್ವ ಅಧ್ಯಕ್ಷೆ ಶಶಿಕಲಾ ವಸ್ತ್ರದ್, ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾಧ್ಯಕ್ಷ ಪ್ರಭುಲಿಂಗ್ ಮಹಾಗಾಂವಕರ್, ಶರಣ ಸಾಹಿತ್ಯ ಪರಿಷತ್ ರಾಷ್ಟ್ರೀಯ ಹಿರಿಯ ಉಪಾಧ್ಯಕ್ಷ ಅಪ್ಪಾರಾವ್ ಅಕ್ಕೋಣಿ, ಜಿಲ್ಲಾಧ್ಯಕ್ಷ ಡಾ. ಮಲ್ಲಿಕಾರ್ಜುನ್ ವಡ್ಡನಕೇರಿ ಸುಶೀಲಾ ಸೋಮಶೇಖರ್, ಚಂದ್ರಿಕಾ ಪರಮೇಶ್ವರ್ ಅವರು ವೇದಿಕೆ ಮೇಲೆ ಉಪಸ್ಥಿತರಿದ್ದರು.

ಡಾ. ಸುಜಾತಾ ಪಾಟೀಲ್, ಎಸ್. ಕೆ. ಬಿರಾದಾರ್ ಅವರು ಕಾರ್ಯಕ್ರಮ ನಿರೂಪಿಸಿದರು. ಕದಳಿ ಮಹಿಳಾ ವೇದಿಕೆಯ ಜಿಲ್ಲಾಧ್ಯಕ್ಷೆ ಡಾ. ಶಾಂತಾ ಅಸ್ಟಿಗೆ ಅವರು ಸ್ವಾಗತಿಸಿದರು. ಪರಿಷತ್ ಜಿಲ್ಲಾಧ್ಯಕ್ಷ ಡಾ. ಮಲ್ಲಿಕಾರ್ಜುನ್ ವಡ್ಡನಕೇರಿ, ಪರಿಷತ್ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶಾಂತಲಿಂಗ್ ಪಾಟೀಲ್ ಕೋಳಕೂರ್, ಕೆ. ನೀಲಾ, ಡಾ. ಸುಜಾತಾ ಜಂಗಮಶೆಟ್ಟಿ, ಡಾ. ಜಯಶ್ರೀ ದಂಡೆ, ಡಾ. ಸರಸ್ವತಿ ಚಿಮ್ಮಲಗಿ, ಬಸವರಾಜ್ ಮೊರಬದ್ ಮುಂತಾದವರು ಪಾಲ್ಗೊಂಡಿದ್ದರು.

# ವಿದ್ಯಾರ್ಥಿ ದೆಸೆಯಿಂದಲೇ ಸ್ಪರ್ಧಾಮನೋಭಾವನೆ ಮೈಗೂಡಿಸಿಕೊಳ್ಳಿ



ಕಲಬುರಗಿ:ಇಂದಿನ ಸ್ಪರ್ಧಾತ್ಮಕ ಯುಗದಲ್ಲಿ ಎಲ್ಲೆಡೆ ಸ್ಪರ್ಧೆ ವ್ಯಾಪಕವಾಗಿದೆ. ನಿರಂತರ ಅಧ್ಯಯನ, ಸಮಯದ ಸದುಪಯೋಗ, ಆಳವಾದ ಅಭ್ಯಾಸ, ದಿನಪತ್ರಿಕೆಗಳನ್ನು ಓದುವುದು, ಹಳೆಯ ಪ್ರಶ್ನೆಪತ್ರಿಕೆಗಳನ್ನು ಬಿಡಿಸುವುದು ಸೇರಿದಂತೆ ಮತ್ತಿತರ ಕ್ರಮಗಳನ್ನು ಅನುಸರಿಸಬೇಕು. ಪ್ರಬಲ ಇಚ್ಛಾಶಕ್ತಿ ಮತ್ತು ಧನಾತ್ಮಕ ಚಿಂತನೆಯಿಂದ ಮುನ್ನುಗ್ಗಿ. ವಿದ್ಯಾರ್ಥಿ ದೆಸೆಯಿಂದಲೇ ಸ್ಪರ್ಧಾಮನೋಭಾವನೆಯನ್ನು ಮೈಗೂಡಿಸಿಕೊಂಡರೆ ಉನ್ನತ ಸಾಧನೆ ಮಾಡಲು ಸಾಧ್ಯವಿದೆ ಎಂದು ಹಿರಿಯ ಸಾಹಿತಿ ಡಾ.ಸ್ವಾಮಿರಾವ ಕುಲಕರ್ಣಿ ಸಲಹೆ ನೀಡಿದರು.

ನಗರದ ಆಳಂದ ರಸ್ತೆಯ ಜೆ.ಆರ್ ನಗರದಲ್ಲಿನ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ ಆಗಷ್ಟ್ ಬ್ಯಾಚನ ವಿದ್ಯಾರ್ಥಿಗಳ ಪ್ರಮಾಣಪತ್ರ ವಿತರಣೆ ಹಾಗೂ ಸಕ್ಸಸ್ ಸಂಸ್ಥೆ ಮತ್ತು 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಏರ್ಪಡಿಸಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳ ಉಚಿತ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್ ಮಾತನಾಡಿ, ನಮ್ಮ ಸಂಸ್ಥೆಯಲ್ಲಿ ತರಬೇತಿ ಪಡೆದ ನೂರಾರು ವಿದ್ಯಾರ್ಥಿಗಳಿಂದು ಬೇರೆ–ಬೇರೆ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ. ಸ್ವಯಂ ಉದ್ಯೋಗವನ್ನು ಮಾಡುತ್ತಿದ್ದಾರೆ. ಪ್ರಸ್ತುತ ಸಂದರ್ಭಗಳಲ್ಲಿ ಎಲ್ಲರಿಗೂ ಕಂಪ್ಯೂಟರ ಜ್ಞಾನ ಅಗತ್ಯವಾಗಿದ್ದು ತರಬೇತಿ ಪಡೆಯಬೇಕು. ವಿದ್ಯಾರ್ಥಿಗಳು ಕೇವಲ ಪಠ್ಯಕ್ಕೆ ಮಾತ್ರ ಸೀಮಿತವಾದರೆ ವ್ಯಕ್ತಿತ್ವ ವಿಕಸನ ಅಸಾಧ್ಯ. ಈ ನಿಟ್ಟಿನಲ್ಲಿ ನಮ್ಮ ಸಂಸ್ಥೆಯಲ್ಲಿ ನಿರಂತರವಾಗಿ ಹತ್ತು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ವಿದ್ಯಾರ್ಥಿಗಳಿಗೆ ಸಾಮಾನ್ಯ ಜ್ಞಾನ ಮುಟ್ಟಿಸುವ ಕಾರ್ಯ ಸಂಸ್ಥೆ ಮಾಡಲಾಗುತ್ತಿದೆ. ಇದರ ಸದುಪಯೋಗವನ್ನು ಮಾಡಿಕೊಳ್ಳಲು ತಿಳಿಸಿದರು.ಕಾರ್ಯಕ್ರಮದಲ್ಲಿ ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್.ಬಿರಾದಾರ, ಸಮಾಜ ಸೇವಕ ಓಂಕಾರ ವಠಾರ, ಸಂಸ್ಥೆಯ ಶಿಕ್ಷಕಿಯರಾದ ಪ್ರಿಯಾಂಕಾ ಉಜಳಂಬಿ, ನಿಲೋಫರ್ ಶೇಖ್, ಐಶ್ವರ್ಯ ಬಿರಾದಾರ, ಪೂಜಾ ಜಮಾದಾರ ಹಾಗೂ ವಿದ್ಯಾರ್ಥಿಗಳಿದ್ದರು.

# ಸಂಸದ ದೊಡ್ಡಮನಿ ಅಭಿನಂದನಾ ಸಮಾರಂಭಕ್ಕೆ ಜನ ಸೇರಿಸಲು ಹಣ ಹಂಚಿಕೆ: ರಾಠೋಡ್ ಆರೋಪ



ಕಲಬುರಗಿ: ಜಿಲ್ಲೆಯ ಚಿತ್ತಾಪುರದಲ್ಲಿ ಶುಕ್ರವಾರ ಜರುಗಿದ ಸಂಸದ ರಾಧಾಕೃಷ್ಣ ದೊಡ್ಡಮನಿ ಅವರ ಅಭಿನಂದನಾ ಸಮಾರಂಭದಲ್ಲಿ ಜನರನ್ನು ಸೇರಿಸಲು ಕಾಂಗ್ರೆಸ್ ನಾಯಕರು ತಲಾ 200ರೂ.ಗಳನ್ನು ಕಾಗದದ ಪ್ಯಾಕೆಜ್‌ನಲ್ಲಿ ಇಟ್ಟು ಹಂಚಿಕೆ ಮಾಡಿದ್ದಾರೆ ಎಂದು ಬಿಜೆಪಿ ಮುಖಂಡ ಮಣಿಕಂಠ್ ರಾಠೋಡ್ ಅವರು ಆರೋಪಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರಾಧಾಕೃಷ್ಣ ದೊಡ್ಡಮನಿ ಅವರು ಸಂಸದರಾಗಿ ಐದು ತಿಂಗಳು ಕಳೆದಿವೆ. ಅವರಿಗೆ ಐದು ತಿಂಗಳಿನ ನಂತರ ಚಿತ್ತಾಪುರದಲ್ಲಿ ಅಭಿನಂದನಾ ಸಮಾರಂಭವನ್ನು ಕಾಂಗ್ರೆಸ್ ಪಕ್ಷದ ವತಿಯಿಂದ ಹಮ್ಮಿಕೊಳ್ಳಲಾಗಿತ್ತು. ಜನರು ಸಮಾರಂಭಕ್ಕೆ ಬರದೇ ಇದ್ದುದರಿಂದ ಪ್ರತಿಯೊಬ್ಬರಿಗೆ ಹಣ ಕೊಟ್ಟು ಕರೆಸಲಾಗಿದೆ ಎಂದು ದೂರಿದರು.

ಅಭಿನಂದನಾ ಸಮಾರಂಭದಲ್ಲಿ ಪಾಲ್ಗೊಂಡು ಹೊರಬರುತ್ತಿದ್ದ ಪ್ರತಿಯೊಬ್ಬರಿಗೆ ದ್ವಾರದಲ್ಲಿ ಕಾಗದದ ಪ್ಯಾಕೆಜ್‌ಗಳಲ್ಲಿ ತಲಾ 200ರೂ.ಗಳನ್ನು ಇಟ್ಟು ಕೊಡಲಾಗಿತ್ತು. ಆ ಪ್ಯಾಕೆಜ್‌ಗಳನ್ನು ಹೊರಬಂದು ತೆಗೆದಾಗ 200ರೂ.ಗಳ ಮುಖಬೆಲೆಯ ನೋಟುಗಳು ಪತ್ತೆಯಾಗಿವೆ. ಈ ಕುರಿತು ವಿಡಿಯೋ ಹಾಗೂ ಭಾವಚಿತ್ರಗಳನ್ನು ಸೆರೆ ಹಿಡಿಯಲಾಗಿದೆ. ಅಲ್ಲದೇ ಪ್ಯಾಕನಲ್ಲಿನ ಹಣ ತೆಗೆದುಕೊಂಡು ಅಲ್ಲಿಯೇ ಪ್ಯಾಕೆಜ್‌ಗಳನ್ನು ಹರಿದು ಬೀಸಾಕಿದ್ದಾರೆ. ಆ ಕುರಿತೂ ಸಹ ಸಾಕ್ಷಿಗಳು ಲಭ್ಯವಿವೆ ಎಂದು ಅವರು ವಿಡಿಯೋ ಹಾಗೂ ಭಾವಚಿತ್ರಗಳನ್ನು ಇದೇ ಸಂದರ್ಭದಲ್ಲಿ ಬಿಡುಗಡೆ ಮಾಡಿ ರಾಠೋಡ್ ಅವರು ಬಹಿರಂಗವಾಗಿ ಪ್ರದರ್ಶಿಸಿದರು. ಕಾಂಗ್ರೆಸ್ ಪಕ್ಷದ ಸಭೆಗಳನ್ನು ಸಾರ್ವಜನಿಕರು ನಿರಾಕರಿಸುತ್ತಿದ್ದಾರೆ ಎಂಬುದಕ್ಕೆ ಹಣ ಕೊಟ್ಟು ಕರೆಸುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕಾಂಗ್ರೆಸ್ಸಿಗರ ವಿರುದ್ಧ ಹರಿಹಾಯ್ದ ಅವರು, ಸಂಸದರ ಅಭಿನಂದನಾ ಸಮಾರಂಭದಲ್ಲಿ ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿರಾಜ್, ಐಟಿಬಿಟಿ ಮತ್ತು ಜಿಲ್ಲಾ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರೂ ಆಗಮಿಸಿದ್ದರೂ ಸಹ ನಿರೀಕ್ಷೆಗೆ ತಕ್ಕಂತೆ ಜನರು ಸೇರಲಿಲ್ಲ. ಅಲ್ಲದೇ ಚಿತ್ತಾಪುರ ತಾಲ್ಲೂಕಿನ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಅಭಿನಂದನಾ ಸಮಾರಂಭಕ್ಕೆ ತಮ್ಮ ಕಚೇರಿಗಳನ್ನು ಬಂದ್ ಮಾಡಿಕೊಂಡು ಹೋಗಿದ್ದಾರೆ. ಇದು ಸಾರ್ವಜನಿಕ ಸೇವೆಯಲ್ಲಿರುವ ಅಧಿಕಾರಿಗಳಿಗೆ ಸರಿಯಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದರು. ತಮ್ಮ ಇಲಾಖೆಯ ಸಚಿವರು ಕಾರ್ಯಕ್ರಮದಲ್ಲಿ ಇದ್ದಾರೆ ಎಂದರೆ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಹೋಗಬಹುದು. ಅದಕ್ಕೂ ಒಂದು ನಡಾವಳಿಯಿದೆ. ಇಡೀ ಕಚೇರಿಯನ್ನು ಬಂದ್ ಮಾಡುವುದು ಸರಿಯಲ್ಲ. ಸರ್ಕಾರಿ ಕಚೇರಿಗಳನ್ನು ಆರಂಭಿಸುವುದು ಹಾಗೂ ಮುಚ್ಚುವುದಕ್ಕೂ ಒಂದು ನಿಯಮ ಇದೆ. ಅದನ್ನು ಯಾರೂ ಸಹ ಮೀರುವಂತಿಲ್ಲ. ಆದಾಗ್ಯೂ, ಸಂಸದರ ಅಭಿನಂದನಾ ಸಮಾರಂಭದಲ್ಲಿ ಚಿತ್ತಾಪುರ ತಾಲ್ಲೂಕಿನ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸೇವಾ ನಿಯಮಗಳನ್ನು ಉಲ್ಲಂಘಿಸಿ ಗ್ರಾಮ ಪಂಚಾಯಿತಿ ಕಚೇರಿಗಳನ್ನು ಬಂದ್ ಮಾಡಿದ್ದಾರೆ ಎಂದು ಅವರು ಗಂಭೀರ ಆರೋಪ ಮಾಡಿದರು.

ಯಾವಾಗ ಬೇಕಾದರೂ ಸರ್ಕಾರಿ ಕಚೇರಿಗಳನ್ನು ಚಾಲು ಮಾಡುವುದು ಹಾಗೂ ಯಾವಾಗ ಬೇಕಾದಾಗ ಬಂದ್ ಮಾಡುವಂತಹ ರಾಜಕೀಯ ತಾಕತ್ತಿನ ಮೇಲೆ ಗುಲಾಮಗಿರಿಯನ್ನು ದೇಶದ ಕಾನೂನು ಹಾಗೂ ಸಂವಿಧಾನವು ಒಪ್ಪುವುದಿಲ್ಲ. ಜಿಲ್ಲಾ ಉಸ್ತುವಾರಿ ಸಚಿವರು ಇಂತಹ ಕೆಲಸಗಳನ್ನು ನಿಲ್ಲಿಸಬೇಕು. ಇಲ್ಲದೇ ಇದ್ದರೆ ಅವರ ಪಾಪದ ಕೊಡ ಹೆಚ್ಚಾಗುತ್ತದೆ ಎಂದು ಅವರು ಎಚ್ಚರಿಸಿದರು. ನಮ್ಮ ಮೇಲೆ ಸುಳ್ಳು ಪ್ರಕರಣಗಳನ್ನು ಹಾಕಿಸಿ ಬಂಧಿಸಿ, ಜೈಲಿಗೆ ಹಾಕಲಾಗುತ್ತಿದೆ. ನಾನು ಎಲ್ಲವನ್ನೂ ಲೆಕ್ಕ ಇಟ್ಟಿದ್ದೇನೆ. ಆ ಲೆಕ್ಕವನ್ನು ಸಮಯ ಬಂದಾಗ ತೀರಿಸುವೆ. ಆದಾಗ್ಯೂ, ಸಂಸದರ ಅಭಿನಂದನಾ ಸಮಾರಂಭಕ್ಕೆ ಕಚೇರಿಗಳನ್ನು ಮುಚ್ಚುವುದು ಸರಿಯಲ್ಲ. ಈ ಕುರಿತು ಜಿಲ್ಲಾಧಿಕಾರಿಗಳು ಸೂಕ್ತ ಕ್ರಮ ಕೈಗೊಳ್ಳಬೇಕು. ಇಲ್ಲವಾದಲ್ಲಿ ನಾವು ನ್ಯಾಯಾಲಯಕ್ಕೆ ಹೋಗುವುದು ಖಚಿತ ಎಂದು ಅವರು ಹೇಳಿದರು.

# ಬೆಂದವರಷ್ಟೇ ಬೇಂದ್ರೆಯಾಗಲು ಸಾಧ್ಯ



ಕಲಬುರಗಿ: ಬೇಂದ್ರೆಯವರು ಜೀವನದಲ್ಲಿ ಅನೇಕ ಕಷ್ಟಗಳನ್ನು ಅನುಭವಿಸಿ, ಅವುಗಳನ್ನು ಸಾಹಿತ್ಯದಲ್ಲಿ ಕೃಷಿ ಮಾಡಿದ್ದರಿಂದ ಅವರ ಸಾಹಿತ್ಯವು ಹೆಚ್ಚು ನೈಜತೆ ಹಾಗೂ ಗಟ್ಟಿತನದಿಂದ ಕೂಡಿದೆ. ಅವರಂತೆ ಸಾಹಿತ್ಯಕವಾಗಿ ಮೇರು ಸಾಧನೆ ಮಾಡಬೇಕಾದರೆ, ಸಾಕಷ್ಟು ಸಮಸ್ಯೆಗಳನ್ನು ಮೆಟ್ಟಿ ನಿಲ್ಲಬೇಕು. 'ಜೀವನದಲ್ಲಿ ಬೆಂದವರು ಮಾತ್ರ ಬೇಂದ್ರೆಯಾಗಲು ಸಾಧ್ಯವಿದೆ' ಎಂದು ಉಪನ್ಯಾಸಕ, ಲೇಖಕ ಎಚ್.ಬಿ.ಪಾಟೀಲ ಮಾರ್ಮಿಕವಾಗಿ ಅಭಿಮತಪಟ್ಟರು.

ನಗರದ ಆಳಂದ ರಸ್ತೆಯ ಜೆ.ಆರ್ ನಗರದಲ್ಲಿನ 'ಸಕ್ಸಸ್ ಕಂಪ್ಯೂಟರ ತರಬೇತಿ ಕೇಂದ್ರ'ದಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಶನಿವಾರ ಏರ್ಪಡಿಸಿದ್ದ 'ವರಕವಿ ದ.ರಾ.ಬೇಂದ್ರೆಯವರ 43ನೇ ಪುಣ್ಯಸ್ಮರಣೋತ್ಸವ' ಕಾರ್ಯಕ್ರಮದಲ್ಲಿ ಅವರು ಮಾತನಾಡುತ್ತಿದ್ದರು.

ಸಮ ಸಮಾಜದ ನಿರ್ಮಾಣಕ್ಕೆ ಅನುಭವ, ನೈಜತೆ, ಮೌಲ್ಯಗಳಿಂದ ಕೂಡಿದ ಶ್ರೇಷ್ಠ ಸಾಹಿತ್ಯವನ್ನು ರಚಿಸಿ, ಕನ್ನಡವನ್ನು ಶ್ರೀಮಂತಗೊಳಿಸಿದ ಬೇಂದ್ರೆಯವರ ಸಾಹಿತ್ಯ, ಕೃತಿಗಳು ವಿಮರ್ಶಕರು ಹಾಗೂ ಸಹೃದಯರ ವಿಮರ್ಶೆಗೆ ಇಂದಿಗೂ ಕೂಡಾ ದಕ್ಕದಿರುವದು ಗಮನಿಸಿದರೆ, ಅವರ ಮೇರು ವ್ಯಕ್ತಿತ್ವ ನಮಗೆ ತಿಳಿಯುತ್ತದೆ. ಬೇಂದ್ರೆಯವರು ನವೋದಯ ಕಾಲಘಟ್ಟದಲ್ಲಿನ ಪ್ರಮುಖವಾದ ಸಾಹಿತಿಯಾಗಿದ್ದಾರೆ. ಮಾನವೀಯ ಮೌಲ್ಯ, ನೈಜತೆಗಳಿಂದ ಕೂಡಿದ ಸಾಹಿತ್ಯವನ್ನು ರಚಿಸಿ ಕನ್ನಡಕ್ಕೆ ಅಮೋಘವಾದ ಕೊಡುಗೆಯನ್ನು ನೀಡಿದ್ದಾರೆ ಎಂದರು. ಕಸಾಪ ಉತ್ತರ ವಲಯದ ಗೌರವ ಅಧ್ಯಕ್ಷ ಶಿವಯೋಗೆಪ್ಪಾ ಎಸ್.ಬಿರಾದಾರ ಮಾತನಾಡಿ, ಬೇಂದ್ರೆಯವರ ಸಾಹಿತ್ಯದಲ್ಲಿ ದೇಶಿ ಸೊಗಡು ಹಾಸು ಹೊಕ್ಕಿದೆ. ಮರಾಠಿ ಮಾತೃಭಾಷೆಯಾದರು ಕೂಡಾ, ಕನ್ನಡದ ಮೇಲಿನ ಅಪಾರವಾದ ಪ್ರೀತಿಯಿಂದ ಕನ್ನಡಕ್ಕೆ ಜ್ಞಾನಪೀಠ ಪ್ರಶಸ್ತಿ ದೊರಕಿಸಿಕೊಟ್ಟಿದ್ದು ಸಾಮಾನ್ಯವಾದ ಸಂಗತಿಯಲ್ಲ ಎಂದು ನುಡಿದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಸ್ಲಾಂ ಶೇಖ್, ಸಮಾಜ ಸೇವಕ ಓಂಕಾರ ವಠಾರ, ಸಂಸ್ಥೆಯ ಶಿಕ್ಷಕಿಯರಾದ ಪ್ರಿಯಾಂಕಾ ಉಜಳಂಬಿ, ನಿಲೋಫರ್ ಶೇಖ್, ಐಶ್ವರ್ಯ ಬಿರಾದಾರ, ಪೂಜಾ ಜಮಾದಾರ, ವಿಜಯಲಕ್ಷ್ಮೀ ಪಂಚಾಳ ಹಾಗೂ ವಿದ್ಯಾರ್ಥಿಗಳಿದ್ದರು.

# ಯುದ್ಧದಿಂದ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಇಸ್ರೇಲ್ ಹಾಗೂ ಇರಾಕ್ ಎರಡು ದೇಶದ ನಡುವೆ ನಡೆಯುತ್ತಿರುವ ಯುದ್ಧದ ಪರಿಣಾಮದಿಂದ ಹವಾಮಾನ ವೈಪರೀತ್ಯ ಉಂಟಾಗಿ ವಿಶ್ವದ ಅನೇಕ ದೇಶಗಳಲ್ಲಿ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಂಭವವಿದೆ ಎಂದು ಕಾಲಜ್ಞಾನ ಬ್ರಹ್ಮ ಡಾ.ಶರಣಬಸವ ಮಹಾಸ್ವಾಮಿಗಳು ತಳ್ಳಿಹಾಳ ಕೋಡಿಮಠ ಗಜೇಂದ್ರಗಡ ಹೇಳಿದರು.

ನಾಡು ಸಂಚಾರ ಪ್ರಯುಕ್ತ ಭಕ್ತರ ತಿಂಗಳ ಬೇಟಿ ಕಾರ್ಯಕ್ರಮದ ನಿಮಿತ್ಯ ಕೊಲ್ಹಾರ ಪಟ್ಟಣಕ್ಕೆ ಆಗಮಿಸಿದ ಸಂದರ್ಭದಲ್ಲಿ ಜಗದ್ಗುರು ರೇಣುಕಾಚಾರ್ಯ ಸೌಹಾರ್ದ ಸಹಕಾರಿ ಸಂಘದವರು ಏರ್ಪಡಿಸಿದ್ದ ಸನ್ಮಾನ ಸ್ವೀಕರಿಸಿ ಅವರು ಮಾತನಾಡಿದರು.

ಕಾರ್ತೀಕ ಮಾಸದ ಕಾಲಜ್ಞಾನವನ್ನು ನುಡಿದ ಅವರು ಈ ತಿಂಗಳಿನಲ್ಲಿ ಮಕ್ಕಳಿಗೆ ಯುವಕರಿಗೆ ಶೀತಭಾದೆ ಚಳಿಜ್ವರದಂತಹ ರೋಗವು ವ್ಯಾಪಕವಾಗಿ ಹರಡುವದು ಸ್ವಾಮಿಗಳಿಗೆ ಕಂಟಕ ಬರುವುದು ಎಂದ ಅವರು ಇದರಿಂದ ಭಾರತ ದೇಶದ ಜನರಿಗೆ ಅಷ್ಟೇನು ಮಾರಕವಲ್ಲ ರಾಜಕೀಯದಲ್ಲಿ ಸ್ಥಾನಪಲ್ಲಟ ಏರಿಳಿತವಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ರಾಜಶೇಖರಯ್ಯ ಹಿರೇಮಠ, ಗುರುಸಿದ್ದಯ್ಯ ಪರಡಿಮಠ, ರುದ್ರಯ್ಯ ಮಠಪತಿ, ವಿದ್ಯಾಧರ ದೇಸಾಯಿ, ಬಸಯ್ಯ ಗಣಾಚಾರಿ, ಈರಯ್ಯ ಗಣಕುಮಾರ ಹಾಗೂ ಬ್ಯಾಂಕ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.

# ಸಾಹಿತ್ಯ ಕ್ಷೇತ್ರಕ್ಕೆ ಬೇಂದ್ರೆ ಅವರ ಕೊಡುಗೆ ಅಪಾರ : ಡಾ.ಭಾರತಿ

■ ಉದಯರಶ್ಮಿ ದಿನಪತ್ರಿಕೆ




ವಿಜಯಪುರ: ಕನ್ನಡ ಸಾಹಿತ್ಯದ ಸುದೀರ್ಘ ಇತಿಹಾಸದಲ್ಲಿ ಸರಳ ಬದುಕಿನ ಸಾರ ಕವನ ಸಂಕಲನಗಳ ಮೂಲಕ ಹೇಳಿದ ಮಹಾನ ವ್ಯಕ್ತಿತ್ವ ಬೇಂದ್ರೆಯವರು ಹೊಂದಿದ್ದರು. ಅವರು ಬದುಕಿನ ಸಾಮರಸ್ಯ ಕವಿಯಾಗಿ ಹೊರಹೊಮ್ಮಿದವರು ಎಂದು ಡಾ.ಡಾ.ಭಾರತಿ ಖಾಸನಿಸ್ ಹೇಳಿದರು.

ಶನಿವಾರ ಅ.26 ರಂದು ಜೆ ಎಸ್ ಎಸ್ ಶಿಕ್ಷಣ ಮಹಾವಿದ್ಯಾಲಯ, ಹಾಗೂ ಕನ್ನಡ ಸಾಹಿತ್ಯ ಪರಿಷತ್ತು ವಿಜಯಪುರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಡಾ ದ ರಾ ಬೇಂದ್ರೆ ಪುಣ್ಯ ಸ್ಮರಣೋತ್ಸವ ನಿಮಿತ್ಯ ಚಿಂತನೆ ಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬೇಂದ್ರೆ ಕವನಗಳನ್ನು ಅಧ್ಯಯನ ಮಾಡುವ ಅತ್ಯವಶ್ಯಕತೆ ಇದೆ, ಸಾಹಿತ್ಯ ಕ್ಷೇತ್ರಕ್ಕೆ ಅವರ ಕೊಡುಗೆ ಅಪಾರ ಎಂದರು,

ಡಾ ದ ರಾ ಬೇಂದ್ರೆ ಕುರಿತು ಉಪನ್ಯಾಸ ನೀಡಿದ ಪಿಡಿಜೆ ಕಾಲೇಜ್ ಉಪನ್ಯಾಸಕ ಸಂತೋಷ ಕುಲಕರ್ಣಿ ಮಾತನಾಡುತ್ತ, ಕನ್ನಡ ಸಾಹಿತ್ಯಕ್ಕೆ ನಾಕುತಂತಿ ಕವನ ಸಂಕಲನ ನೀಡುವದರ ಮೂಲಕ ಜ್ಞಾನಪೀಠ ಪ್ರಶಸ್ತಿ ಪಡೆದು ನಾಡಿಗೆ ಗೌರವ ತಂದವರು. ಕಷ್ಟದಲ್ಲಿ ನೋವುಂಡು ಬೆಳದು 37 ಕವನ ಸಂಕಲನ ಬರೆಯುವದರ ಮೂಲಕ ಕನ್ನಡ ಸಾಹಿತ್ಯ ಶ್ರೀಮಂತಗೊಳಿಸಿದರು. ಅನೇಕ ಕವನಗಳು ಪಠ್ಯಕ್ರಮದಲ್ಲಿ ಅಳವಡಿಸಲಾಗಿದೆ. ವರಕವಿ ಎಂದು ಬಿರುದು ಹೊಂದಿದ ಬೇಂದ್ರೆಯವರು ಸೋಲಾಪುರ, ಸಾಂಗ್ಲಿ, ಪುಣೆ, ಶಿರಹಟ್ಟಿ, ಮುಂಬೈ ಹೀಗೆ ಹಲವಾರು ಪಟ್ಟಣಗಳಲ್ಲಿ ಜೀವನ ಸಾಗಿಸಿ ಕನ್ನಡ ಬೆಳಸಿದವರು ಎಂದರು.

ಮುಖ್ಯ ಅತಿಥಿಗಳಾಗಿ ಮಾತನಾಡಿದ ಕಸಾಪ ಕೋಶಾಧ್ಯಕ್ಷ ಡಾ ಸಂಗಮೇಶ ಮೇತ್ರಿ ಮಾತನಾಡುತ್ತ, ಡಾ ಬೇಂದ್ರೆ ಅವರು ಸರಳ ಬದುಕು ಸಾಗಿಸುವದರ ಜೊತೆ ಬದುಕಿನ ಸರಳ ತಿರುಳು ನಾದಲೀಲೆ, ಸಖೀಗೀತೆ ಕವನ ಸಂಕಲನಗಳ ಮೂಲಕ ಹೇಳಿದ್ದಾರೆ, ಸಾಹಿತ್ಯ ಎಲ್ಲ ಹಂತದಲ್ಲಿಯು ಬೇಕು ಎಂದರು.

ಕಾರ್ಯಕ್ರಮದ ಆದ್ಯಕ್ಷ ಸ್ಥಾನ ವಹಿಸಿದ ಕನ್ನಡ ಸಾಹಿತ್ಯ ಪರಿಷತ್ತು ಅಧ್ಯಕ್ಷ ಹಾಸಿಂಪೀರ ವಾಲೀಕಾರ ಮಾತನಾಡಿದರು.

ಇದೇ ಸಂದರ್ಭದಲ್ಲಿ ಸಂತೋಷ ಕುಲಕರ್ಣಿ ಬರೆದ "ಮಾತು ಮಥಿಸಿದ ಮಹಾಕವಿ" ದ ರಾ ಬೇಂದ್ರೆ ಕು–ರಿತು ವಿಮರ್ಶಾತ್ಮಕ ಗ್ರಂಥ ಬಿಡುಗಡೆ ಮಾಡಲಾಯಿತು.

ಡಾ. ಮಳಿಸ್ವಾಮಿ ಹಿರೇಮಠ. ಡಾ. ಮಂಜುನಾಥ ಕೋರಿ. ಡಾ. ಜ್ಯೋತಿ ಪಟ್ಟಣಶೆಟ್ಟಿ. ಡಾ.ಬಸವರಾಜ ಹಿರೇಮಠ. ಸುನೀಲ ಪಾಟೀಲ. ಪೀರಸಾಬ ಮುಲ್ತಾನಿ. ಅಣ್ಣಾರಾಯ ಮಸಳಿ. ಡಾ.ಶಿವಾನಂದ ಶೇಗುಣಸಿ ಉಪಸ್ಥಿತರಿದ್ದರು.

ಶಂಕರ ಕೋಲಕಾರ ಪ್ರಾಥಿ9ಸಿದರು. ಅರುಣ ಚವ್ಹಾಣ ಸ್ವಾಗತಿಸಿದರು. ಭಾಗ್ಯಶ್ರೀ ಕೋಟ್ಯಾಳ ನಿರೂಪಿಸಿದರು. ಸುಷ್ಮಾ ಸಿದ್ದಾಪುರ ವಂದಿಸಿದರು.

# ಏಕಲವ್ಯ ರೋಲರ್ ಸ್ಕೇಟಿಂಗ್ ಅಕಾಡೆಮಿ ವಿದ್ಯಾರ್ಥಿಗಳ ಸಾಧನೆ

■ ಉದಯರಶ್ಮಿ ದಿನಪತ್ರಿಕೆ




ಮುದ್ದೇಬಿಹಾಳ: ಪಟ್ಟಣದ ಕರಾಟೆ ಶಿಕ್ಷಕ ಶಿವಕುಮಾರ ಶಾರದಳ್ಳಿ ಸಂಸ್ಥಾಪಿತ ಏಕಲವ್ಯ ರೋಲರ್ ಸ್ಕೇಟಿಂಗ್ ಅಕಾಡೆಮಿಯ ವಿದ್ಯಾರ್ಥಿಗಳು ಧಾರವಾಡದಲ್ಲಿ ನಡೆದ ರಾಜ್ಯ ಮಟ್ಟದ ಸ್ಕೇಟಿಂಗ್ ಅಕಾಡಮಿ ಸ್ಪರ್ದೆಯಲ್ಲಿ 2ಬಂಗಾರ, 3ಬೆಳ್ಳಿ ಮತ್ತು 5 ಕಂಚಿನ ಪದಕಗಳನ್ನು ಪಡೆಯುವ ಮೂಲಕ ತಾಲೂಕಿನ ಕೀರ್ತಿ ಹೆಚ್ಚಿಸಿದ್ದಾರೆ.


ಅ.26 ಮತ್ತು 27 ರಂದು ಧಾರವಾಡದ ಆರ್. ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಜ್ಯ ಮಟ್ಟದ ಸ್ಪರ್ದೆಯಲ್ಲಿ ಅಕಾಡಮಿಯ ವಿದ್ಯಾರ್ಥಿಗಳಾದ ವಿಕ್ರಾಂತ ಶಾರದಳ್ಳಿ, ಅನೂಪ ತುಪ್ಪದ, ಅದಿತಿ ನಾಗೂರ, ಸಾದ್ವಿ ನಾಗೂರ, ಕೃತಿಕಾ ತುಪ್ಪದ, ಶಕುಂತಲಾ ಶಾರದಳ್ಳಿ ಭಾಗವಹಿಸಿದ್ದರು.

500ಮೀ ಮತ್ತು 1000ಮೀ ಸ್ಪರ್ದೆಯಲ್ಲಿ ಕೃತಿಕಾ ತುಪ್ಪದ ಬಂಗಾರದ ಪದಕ, ವಿಕ್ರಾಂತ 500ಮೀ ಕಂಚಿನ ಮತ್ತು 1000ಮೀ ನಲ್ಲಿ ಬೆಳ್ಳಿಯ ಪದಕ, ಅದಿತಿ 500ಮೀ ಮತ್ತು 1000ಮೀ ನಲ್ಲಿ ಬೆಳ್ಳಿಯ ಪದಕ, ಶ್ರೇಯಾ ಮತ್ತು ಶಕುಂತಲಾ ಕಂಚಿನ ಪದಕ ಪಡೆದು ತಾಲೂಕಿನ ಹಿರಿಮೆಯನ್ನ ಹೆಚ್ಚಿಸಿದ್ದಾರೆ.

ಇವರ ಸಾಧನೆಗೆ ಅಕಾಡಮಿಯ ವಿದ್ಯಾರ್ಥಿಗಳ ಪಾಲಕರಾದ ಬಸವರಾಜ ನಾಗೂರ, ಉಮಾ ಶಾರದಳ್ಳಿ, ನಾಗೇಂದ್ರ ಶಿವಶಿಂಪಿ, ಮಲ್ಲನಗೌಡ ಕಡಕಲ್ಲ, ವಿಜು ಪತ್ತಾರ ಸೇರಿದಂತೆ ಇನ್ನಿತರರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ರಾಮಾಯಣ–ಮಹಾಭಾರತ ಪುರಾಣದ ಕಥೆಗಳಲ್ಲ, ಇತಿಹಾಸ

■ ಉದಯರಶ್ಮಿ ದಿನಪತ್ರಿಕೆ



ಮುದ್ದೇಬಿಹಾಳ: ರಾಮಾಯಣ ಮತ್ತು ಮಹಾಭಾರತ ನಮ್ಮ ದೇಶದ ಜನತೆಗೆ ಮಾತ್ರವಲ್ಲದೇ ಇಡೀ ಜಗತ್ತಿಗೆ ಭಾರತ ಕೊಟ್ಟ ಅತ್ಯಮೂಲ್ಯ ಕೊಡುಗೆ ಎಂದು ಆರ್‌ಎಸ್‌ಎಸ್ ನ ಉತ್ತರ ಕರ್ನಾಟಕ ಪ್ರಾಂತ ಕಾರ್ಯಕಾರಿಣಿ ಸದಸ್ಯ ಅರವಿಂದರಾವ್ ದೇಶಪಾಂಡೆ ಹೇಳಿದರು.

ರಾಮಾಯಣ ಮತ್ತು ಮಹಾಭಾರತ ಪುರಾಣದ ಕಥೆಗಳಲ್ಲ ಅವು ಇತಿಹಾಸ. ರಾಮ ಕಾಲ್ಪನಿಕ ಪುರುಷನಲ್ಲ ಐತಿಹಾಸಿಕ ಪುರುಷ ಎನ್ನುವದು ಇಂದು ವೈಜ್ಞಾನಿಕವಾಗಿ ಸಿದ್ಧವಾಗುತ್ತಿದೆ. ದೆಹಲಿಯ ಸಂಶೋಧನಾ ಸಂಸ್ಥೆಯೊಂದು 35 ವರ್ಷಗಳಿಂದ ಸಂಶೋದನೆ ಮಾಡಿ ರಾಮನ ಇತಿಹಾಸದ ಕುರುಗಳನ್ನ ಗುರುತಿಸಿದ್ದಾರೆ. ಶ್ರೀರಾಮ ಲಂಕೆಗೆ ಹೋಗುವಾಗ ಸಮುದ್ರದ ಮಧ್ಯೆ ಸೇತುವೆ ನಿರ್ಮಿಸಿದ್ದೂ ಕೂಡ ಶೋಧನೆಯಿಂದ ಖಚಿತವಾಗಿದೆ ಈ ಎಲ್ಲವನ್ನೂ ಗಮನಿಸಿದಾಗ ರಾಮ ಕಾಲ್ಪನಿಕ ಪುರುಷನಲ್ಲ ಇತಿಹಾಸ ಪುರುಷ ಎಂದು ಖಚಿತವಾಗಿದೆ ಎಂದರು.

ಸಂಘದ ಶಾಖೆಯಲ್ಲಿ ಪ್ರತಿನಿತ್ಯ ಶಾರೀ–ರಿಕ ಕಾರ್ಯಕ್ರಮಗಳಾದ ಸೂರ್ಯ ನಮಸ್ಕಾರ, ಯೋಗ, ದಂಡಾಭ್ಯಾಸ ಹೇಳಿಕೊಟ್ಟು ಶರೀರ, ಮನಸ್ಸು, ಬುದ್ಧಿಗಳಿಗೆ ಸಂಸ್ಕಾರ ಕೊಡುವ ಮೂಲಕ ವ್ಯಕ್ತಿ ನಿರ್ಮಾಣದ ಕೆಲಸ ಮಾಡಲಾಗುತ್ತೆ. ಇದ–ರಿಂದ ಸಮಾಜದಲ್ಲಿ ಆತ್ಮ ವಿಶ್ವಾಸ ಹೆಚ್ಚುತ್ತದೆ ಎಂದರು.

ಜಾತಿ, ಮತ, ಪಂಥ ಎಲ್ಲವನ್ನೂ ಬಿಟ್ಟು ನಾವೆಲ್ಲರೂ ಭಾರತ ಮಾತೆಯ ಪುತ್ರರು ಒಂದಾಗಿ ಬರಬೇಕು, ಹಿಂದೂ ಸಮಾಜ ಸಂಘಟಿ–ತವಾಗಬೇಕೆನ್ನುವ ದೃಷ್ಟಿಯಿಂದ ಸಂಘವನ್ನ ಸ್ಥಾಪಿಸಲಾಯಿತು. ಹಿಂದೆ ಯಾರೂ ಕೂಡ ತಮ್ಮನ್ನು ತಾವು ಹಿಂದೂಗಳೆಂದು ಹೇಳಿಕೊಂಡು ಮುಂದೆ ಬರುತ್ತಿರಲಿಲ್ಲ. ಮುಜೆ ಗಧಾ ಕಹೋ ಹಿಂದೂ ಮತ್ ಕಹೋ ಎಂದು ಅನೇಕ ಪ್ರಮುಖರು ತಮ್ಮ ಭಾಷಣದಲ್ಲಿ ಹೇಳುತ್ತಿದ್ದರು. ಇಂತಹ ಪರಿಸ್ಥಿತಿಯಲ್ಲಿ ಕೇವಲ 15 ಯುವರಿಂದ ಶುರುವಾದ ಶಾಖೆ ಪ್ರಬಲವಾಗಿ ಬೆಳೆಯುತ್ತಿತ್ತು. ದೇಶಕ್ಕೆ ಸ್ವಾತಂತ್ರ್ಯ ಸಿಕ್ಕ ಬಳಿಕ ಅಧಿಕಾರದ ಚುಕ್ಕಾಣಿ ಹಿಡಿದವರೂ ಸಂಘವನ್ನು ತುಳಿಯುವ ಪ್ರಯತ್ನ ಮಡಿತ್ತು. ಅದೆಲ್ಲವಿರೋಧವನ್ನೂ ಎದುರಿಸಿದ ಪರಿಣಾಮ ಇಂದು ಪ್ರತೀ ಊರಲ್ಲೂ ಗರ್ವಸದಿಂದ ಹೇಳು ನಾನೊಬ್ಬ ಹಿಂದೂ ಎನ್ನುವ ಫ್ಲೆಕ್ಸಳು ಕಾಣುತ್ತಿವೆ ಎಂದರು.

ಗಣ್ಯ ವ್ಯಾಪಾರಸ್ಥ ಬಸವರಾಜ ಮೋಟಗಿ ಮುಖ್ಯ ಅತಿಥಿಯಾಗಿದ್ದರು.

ಪ್ರಮುಖರಾದ ಬಸವರಾಜ ನಂದಿಕೇಶ್ವರಮಠ, ಪ್ರಭು ಕಡಿ, ಕಸಾಪ ಮಾಜಿ ಅಧ್ಯಕ್ಷ ಮಹಾಂತಪ್ಪ ನಾವದಗಿ, ಭಾಜಪಾ ಜಿಲ್ಲಾಧ್ಯಕ್ಷ ಆರ್. ಎಸ್.ಪಾಟೀಲ ಕೂಚಬಾಳ, ಸಂಘದ ತಾಲೂಕು ಕಾರ್ಯವಾಹ ಚೇತನ ಮೂಗನೂರ, ನಗರ ಕಾರ್ಯವಾಹ ಪ್ರಭು ನಂದೆಪ್ಪನವರ ಸೇರಿದಂತೆ ಅನೇಕರು ಭಾಗಿಯಾಗಿದ್ದರು.



# ಗ್ರಾಮೀಣ ಕ್ರೀಡಾಪಟುಗಳಿಗೆ ಪ್ರೋತ್ಸಾಹ ಅಗತ್ಯ :ಕುಬಕಡ್ಡಿ

■ ಉದಯರಶ್ಮಿ ದಿನಪತ್ರಿಕೆ

ಚಿಮ್ಮಡ: ಶರವೇಗದಲ್ಲಿ ಅಂತರ್ ರಾಷ್ಟ್ರೀಯ ಮಟ್ಟದಲ್ಲಿ ಬೆಳೆಯುತ್ತಿರುವ ಕ್ರೀಢೆ ಕಬ್ಬಡ್ಡಿಯಲ್ಲಿ ತರಬೇತಿ ಪಡೆಯುತ್ತಿರುವ ಗ್ರಾಮೀಣ ಭಾಗದ ಕ್ರೀಢಾ ಪಟುಗಳಿಗೆ ಪ್ರೋತ್ಸಾಹ ನೀಡುವ ಅಗತ್ಯವಿದೆ ಎಂದು ಬಾಗಲಕೋಟ ಜಿಲ್ಲಾ ಅಮೇಚೂರ ಅಧ್ಯಕ್ಷರಾದ ಶಾಸಣ್ಣ ಕುಬಕಡ್ಡಿ ಹೇಳಿದರು.

ಇಲ್ಲಿನ ಗ್ರಾಮ ಪಂಚಾಯತಿ ಸಭಾಭವನದಲ್ಲಿ ಶನಿವಾರ ಓಂ ಪ್ರಭುಲಿಂಗೇಶ್ವರ ನ್ಯೂ ಕಬ್ಬಡ್ಡಿ ತಂಡ ಹಾಗೂ ಬಾಗಲಕೋಟ ಜಿಲ್ಲಾ ಕಬ್ಬಡ್ಡಿ ಅಮೇಚೋರ ಅಸೋಶಿಯೇಷನ್ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡಿದ್ದ ಚಿಮ್ಮಡ ಕಬ್ಬಡ್ಡಿ ವೈಭವ–2024 ಕಾರ್ಯಕ್ರಮದ ಪೂರ್ವಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ಜಿಲ್ಲೆಯ ಪ್ರತಿಯೊಂದು ಉಪ ವಿಭಾಗ ಮಟ್ಟದಲ್ಲಿ 70ಕ್ಕೂ ಅಧಿಕ ತಂಡಗಳಿದ್ದು ಪ್ರತಿಯೊಂದು ತಾಲೂಕು ಕೇಂದ್ರಗಳಲ್ಲಿ ಇಂತಹ ಚಾಂಪಿಯನ್ ಟ್ರೋಫಿಗಳನ್ನು ಹಮ್ಮಿಕೊಂಡು ಪ್ರೋತ್ಸಾಹಿಸುವ ಮೂಲಕ ಅವರನ್ನು ರಾಷ್ಟ್ರಮಟ್ಟದಲ್ಲಿ ಬೆಳೆಯುವಂತೆ ಪ್ರೋತ್ಸಾಹಿಸಬೇಕಿದೆ ಎಂದರು. ಗ್ರಾ.ಪಂ. ಮಾಜಿ ಅಧ್ಯಕ್ಷ ಪ್ರಭು ನೇಸೂರ ಪ್ರಾಸ್ತಾವಿಕವಾಗಿ ಮಾತನಾಡಿದರು. ರೆಫರಿ ಬೋರ್ಡ ಅಧ್ಯಕ್ಷ ಎಸ್.ಎಫ್. ಬಾರಡ್ಡಿ, ಪ್ರಮುಖರಾದ ಉಮೇಶ ಪೂಜಾರಿ ಮಾತನಾಡಿದರು.

ಮುಖ್ಯ ಅಥಿತಿಗಳಾಗಿ ರಬಕವಿ–ಬನಹಟ್ಟಿ ತಾಲೂಕಾ ಮೇಲ್ವಿಚಾರಕ ಆರ್. ವೈ. ಮೇತ್ರಿ, ಗ್ರಾಮ ಪಂಚಾಯತಿ ಸದಸ್ಯರಾದ ಮಹಾಲಿಂಗ ಮಾಯನ್ನವರ, ಬಾಳಪ್ಪಾ ಗಡೆಪ್ಪನವರ, ಮಹಾಲಿಂಗ ಬಳಗಾರ, ಪ್ರಭು ಮುದೋಳ, ಶ್ರೀಶೈಲ ಮಠಪತಿ, ಕೇಶವ ವಂದಾಲ, ಓಂ ಪ್ರಭುಲಿಂಗೇಶ್ವರ ನ್ಯೂ ಕಬ್ಬಡ್ಡಿ ತಂಡದ ಕ್ರೀಢಾಪಟುಗಳು ಸೇರಿದಂತೆ ಹಲವಾರು ಜನ ಪ್ರಮುಖರು ಉಪಸ್ಥಿತರಿದ್ದರು.

# ಜವಾಬ್ದಾರಿ – ಅಗ್ಗದ ಜನರಿಂದ ಅನಪೇಕ್ಷಿತ

■ ಉದಯರಶ್ಮಿ ದಿನಪತ್ರಿಕೆ



‘ಭಾವ ರಶ್ಮಿ’

ಜವಾಬ್ದಾರಿ ಎನ್ನುವುದು ಚಿಕ್ಕ ಪದ ಆದರೆ ಸಾಗರರದಷ್ಟು ವಿಶಾಲವಾದ ಅರ್ಥವನ್ನು ಒಳಗೊಂಡಿದೆ. ಜವಾಬ್ದಾರಿ ಎಲ್ಲ–ರಿಂದ ಸಾಧ್ಯವೂ ಇಲ್ಲಾ. ಸಮಾಜವಿರಲಿ, ರಾಜಕೀಯವಿರಲಿ, ಕುಟುಂಬವಿರಲಿ, ಗುಂಪುಗಳಲ್ಲಿ ಜವಾಬ್ದಾರಿ ಹೊರುವವ ಮಾತ್ರ ನಾಯಕನಾಗಲು ಸಾಧ್ಯ.

ಜಪಾನ್ ದೇಶದಲ್ಲಿ ಸಾಗರ/ಸಮುದ್ರದ ಹಬ್ಬ ಎಂದು ಆಚರಿಸುವ ರೂಢಿ ಇದೆ. ಆ ದಿನ ಸಾಗರದ ದಡದಲ್ಲಿರುವ ಊರಿನವರು ಸಾಗರದ ಹತ್ತಿರ ಬಂದು ಸಾಗರದ ಮರಳಿನಲ್ಲಿ ಉಂಡು, ತಿಂದು, ನಲಿದು ದೇವರ ಆರಾಧನೆ ಮಾಡಿ ಮನೆಗೆ ಮರಳುವುದು.

ಜಪಾನಿನ ಸಾಗರದ ದಡವೊಂದರ ಹತ್ತಿರವಿರುವ ಎತ್ತರದ ಬೆಟ್ಟದ ಮೇಲೆ ನೂರಾರು ಮನೆಗಳಿರುವ ಊರೊಂದಿತ್ತು. ಆ ಸಾಗರದ ಹಬ್ಬವನ್ನು ಆಚರಿಸಲು ಆ ಊರಿನ ಎಲ್ಲ ಮಕ್ಕಳು, ಹಿರಿಯರು, ಕಿರಿಯರು ಆ ಬೆಟ್ಟದ ಮೇಲಿಂದ ಕೆಳಗಿಳಿದು ಹತ್ತಿರದ ಸಾಗರದ ಮರಳಿನ ಮೇಲೆ ಬಂದಿಳಿದು, ನಕ್ಕು–ನಲಿದು ಹಬ್ಬವನ್ನು ತಮ್ಮದೇ ವಿಶಿಷ್ಟ ರೀತಿಯಲ್ಲಿ ಆಚರಿಸತೊಡಗಿದ್ದರು. ಈ ಹಬ್ಬದ ದಿನದಂದು ಎಲ್ಲರೂ ಕೆಳಗಡೆ ಬಂದಾಗ ಆ ಊರಿನ ಮನೆಗಳನ್ನು ಕಾಯುವವರು ಯಾರು ಎಂದು ಆ ಊರಿನ ಮುದುಕನ್ನೊಬ್ಬನನ್ನು ಊರನ್ನು ಕಾಯಲು ನೇಮಿಸಿದ್ದರು. ಇವರೆಲ್ಲ ಆ ಸಾಗರದ ಹಬ್ಬವನ್ನು ಮುಗಿಸಿಕೊಂಡು ಊರಿಗೆ ಮರಳುವವರೆಗೆ ಆ ವ್ಯಕ್ತಿ ಇಡೀ ಊರನ್ನು ಕಾಯಬೇಕು. ಅದು ಅವನ ಜವಾಬ್ದಾರಿಯಾಗಿತ್ತು.



ಇಡೀ ಊರು ಆ ದಿನ ಆ ಬೆಟ್ಟದ ಕೆಳಗಡೆ ಬಂದು ಸಾಗರದ ದಡದಲ್ಲಿ ನಲಿಯುತ್ತಿದೆ. ಬೆಟ್ಟದ ಮೇಲಿನಿಂದ ಆ ಮುದುಕನೊಬ್ಬನೇ ಇವರನ್ನೆಲ್ಲ ದೂರದಿಂದ ನೋಡುತ್ತಿದ್ದಾನೆ. ಅದೇನೋ ನೋಡ ನೋಡುತ್ತಿದ್ದಂತೆ ವಾತಾವರಣವೇ ಬದಲಾಯಿತು. ಗಾಳಿ ಬೀಸಲು ಪ್ರಾರಂಭವಾಯಿತು. ಮೋಡಗಳ ಸಂಚಲನ ಬದಲಾಯಿತು. ಇದನ್ನು ಸೂಕ್ಷ್ಮವಾಗಿ ಗಮನಿಸಿದ ಆ ಮುದುಕ ಇದೊಂದು ಸುನಾಮಿಯ ಮುನ್ನೆಚ್ಚರಿಕೆ ಎಂದು ಖಾತ್ರಿಪಡಿಸಿಕೊಂಡ ಏಕೆಂದರೆ ಅವನು ಮುದುಕನಾದ್ದರಿಂದ ಸಾಕಷ್ಟು ಇಂತಹ ಅನುಭವಗಳನ್ನು ಅವನು ತನ್ನ ಜೀವಮಾನದಲ್ಲಿ ನೋಡಿದ್ದ. ಇನ್ನು ಕೆಲವೇ ಕ್ಷಣಗಳಲ್ಲಿ ಸುನಾಮಿ ಬಂದು ಕೆಳಗಿರುವ ಊರಿನ ಎಲ್ಲ ಜನರನ್ನು ಅಪ್ಪಳಿಸಿ ಜಲಸಮಾಧಿ ಮಾಡಿ ಬಿಡುತ್ತದೆ ಎಂಬುದು ಅವನಿಗೆ ಖಚಿತವಾಯಿತು.

ಆ ಕ್ಷಣವೇ ಊರ ಜನರನ್ನು ಎಚ್ಚರಿಸಲು ಬೆಟ್ಟದ ಮೇಲಿನಿಂದ ಜೋರಾಗಿ ಕೂಗಿಕೊಂಡ, ಅರಚಿಕೊಂಡ. ಆ ಸಾಗರದ ಅಲೆಗಳ ಅಪ್ಪಳಿಸುವಿಕೆಯ ಸದ್ದಿನಲ್ಲಿ, ಮತ್ತು ಎಲ್ಲ ಜನರ ಗಲಾಟೆಯಲ್ಲಿ, ಸುಂಯ್ ಗುಟ್ಟುತ್ತಿದ್ದ ಗಾಳಿಯ ಸದ್ದಿನಲ್ಲಿ ಜನರಿಗೆ ಕೇಳುವುದಾದರೂ ಹೇಗೆ!

ಆ ಕಡಿಮೆ ಸಮಯದಲ್ಲಿ ಆ ಮುದುಕ ಮೇಲಿನಿಂದ ಕೆಳಗೆ ಓಡಿ ಬರುವುದು ಅಸಾಧ್ಯವಿತ್ತು. ಹೀಗಾಗಿ ಅವನು ಮಾಡಿದ ಎಲ್ಲ ಪ್ರಯತ್ನಗಳು ವ್ಯರ್ಥವಾದವು. ಅವನಿಗೆ ಏನು ಮಾಡಬೇಕೆಂದು ತೋಚಲಿಲ್ಲ. ಏನಾದರೂ ಮಾಡಿ ಜನರನ್ನು ಎಚ್ಚ–ರಿಸಲೇಬೇಕೆಂದುಕೊಂಡ. ತಕ್ಷಣವೇ ಮನೆಯೊಂದಕ್ಕೆ ಬೆಂಕಿ ಇಟ್ಟ. ಆ ಬೆಂಕಿಯ ಹತ್ತಿ ಉರಿಯುತ್ತಿದ್ದಂತೆ ಕೆಳಗಿನಿಂದ ಜನರು ಅದನ್ನು ನೋಡಿದರು ಏಕೆಂದರೆ ಬೆಂಕಿ ಎಲ್ಲಿದ್ದರೂ ಜನರ ದೃಷ್ಟಿಯನ್ನು ಆಕರ್ಷಿಸುತ್ತದೆ.

ಅಯ್ಯೋ ನಮ್ಮ ಮನೆಗಳಿಗೆ ಬೆಂಕಿ ಬಿದ್ದಿದೆ, ಊರು ಸುಡುತ್ತಿದೆ ಎಂದುಕೊಂಡು ಜನರು ಗಾಬರಿಯಿಂದ ಕೆಳಗಿನ ಸಾಗರದ ದಡದಿಂದ ಓಡೋಡಿ ಮೇಲೆ ಬಂದರು. ಎಲ್ಲ ಜನರು ದಡದಿಂದ ಮೇಲೆ ಬಂದ ಕೆಲವೇ ಕ್ಷಣಗಳಲ್ಲಿ ಸಾಗರದ ಸುನಾಮಿ ಆ ದಡಕ್ಕೆ ಅಪ್ಪಳಿಸಿಬಿಟ್ಟಿತ್ತು. ಅಷ್ಟರಲ್ಲಿ ಜನರು ಸುರಕ್ಷಿತವಾಗಿ ಮೇಲೆ ತಲುಪಿದ್ದರು. ಜನರಿಗೆ ಎರಡೆರಡು ಆಘಾತ. ಈ ಕಡೆ ಸುನಾಮಿ ಆ ಕಡೆ ಬೆಂಕಿ.

ಕೊನೆಗೆ ತಮ್ಮ ಊರನ್ನು ಸೇರಿ ಹೊತ್ತಿ ಉರಿಯುತ್ತಿರುವ ಮನೆ ಹತ್ತಿರ ಜನರು ಬಂದು ನಿಂತರು. ಹೊತ್ತಿ ಉರಿಯುತ್ತಿರುವ ಮನೆ ಬೇರೆ ಯಾರದು ಆಗಿರಲಿಲ್ಲ ಆ ಊರನ್ನು ಕಾಯುತ್ತಿರುವ ಮುದುಕನದೇ ಆಗಿತ್ತು. ಈ ಜನರನ್ನು ಎಚ್ಚರಿಸಲು ತನ್ನದೇ ಮನೆಗೆ ಬೆಂಕಿ ಹಾಕಿಕೊಂಡು ಇಡೀ ಊರನ್ನು ಕಾಪಾಡಿದ ಮಹಾತ್ಮನೆಂದು ಎಲ್ಲರಿಗೂ ತಿಳಿಯಿತು. ಆ ಮುದುಕನನ್ನು ಕೊಂಡಾಡಿದರು.

ಆ ಮುದುಕ ಸುನಾಮಿ ವಿಷಯವನ್ನು ಮುಚ್ಚಿಟ್ಟುಬಿಟ್ಟಿದ್ದರೆ ಇಡೀ ಊರೇ ಅವನದಾಗುತ್ತಿತ್ತು. ಅಲ್ಲಿರುವ ಸಂಪತ್ತು ಕೂಡಾ ಅವನದೇ ಆಗಿರುತ್ತಿತ್ತು. ಕೇವಲ ಸಂಪಾತ್ತಿಗಾಗಿ ಜೊತೆ ಇರುವವರನ್ನೇ ನಡು ನೀರಲ್ಲಿ ಮುಳುಗಿಸುವ ಇಂದಿನ ಕಪಟ ಜನರಿಗೆ ಈ ಮುದುಕನ ಕಾರ್ಯ ಆದರ್ಶವಾಗಿ ಕಾಣುವುದಲ್ಲವೇ.

ಈ ಘಟನೆ ಮತ್ತು ಆ ಮುದುಕ ಜಪಾನಿನ ಇತಿಹಾಸದ ಪುಟ ಸೇರಿದರು. ಅವನನ್ನು ಗೌರವಿಸಲಾಯಿತು. ಸಾಗರದ ಹಬ್ಬ ಬಂದಾಗಲೆಲ್ಲ ವಿಶೇಷವಾಗಿ ಆ ಊರು ಇಂದಿಗೂ ಅವನನ್ನು ನೆನೆದು ಪೂಜಿಸುತ್ತಿರಬಹುದು.

ಒಂದು ದೇಶಕ್ಕಾಗಿ, ಒಂದು ಊರಿಗಾಗಿ, ಒಂದು ಮನೆಗಾಗಿ, ಒಂದು ಭಾಷೆಗಾಗಿ, ಒಂದು ಸಂಸ್ಥೆಗಾಗಿ, ಒಂದು ಮುಖಪುಟದ ಸಾಹಿತ್ಯಕ ಗ್ರೂಪಿಗಾಗಿ ಹೀಗೇ ತನ್ನತನವನ್ನು ಲೆಕ್ಕಿಸದೆ, ತನ್ನ ಸ್ವಾರ್ಥವನ್ನು ಬದಿಗಿಟ್ಟು, ತಮ್ಮ ಸ್ವಂತದ್ದನ್ನು ತ್ಯಾಗ ಮಾಡುವ ವ್ಯಕ್ತಿ ಗೌರವಕ್ಕೆ ಪಾತ್ರರಾಗುತ್ತಾನೆ, ನಾಯಕ ಎನಿಸಿಕೊಳ್ಳುತ್ತಾನೆ. ಆದರೆ ತನ್ನದೇ ಸ್ವಾರ್ಥಕ್ಕಾಗಿ ಇಡೀ ಕುಟುಂಬವನ್ನು ಬೀಳಿಸುವವ, ಇಡೀ ಗ್ರೂಪ್ ನ್ನು ಹಾಳು ಮಾಡುವವ, ಇಡೀ ಸಮಾಜದಲ್ಲಿ ಗುಲ್ಲೆಬ್ಬಿಸುವವ ನಾಯಕನಾಗಲಾರ.

ಒಮ್ಮೆ ಜವಾಬ್ದಾರಿ ಹೊತ್ತು ನಿಂತರೆ ತನ್ನ ಕೊನೆಯ ವರೆಗೂ ತನ್ನವರಿಗೆ, ತನ್ನ ವೇದಿಕೆಗೆ, ತನ್ನ ಮನೆಗೆ, ತನ್ನ ಸಮಾಜಕ್ಕೆ ನಿಷ್ಠೆಯಿಂದಿರುವವ ಮಾತ್ರ ಗೌರವಕ್ಕೆ ಭಾಜನನಾಗುತ್ತಾನೆ.

ಇಂದಿನ ಸೈಬರ್ ಯುಗದಲ್ಲಿ ಇನ್ನೊಬ್ಬರನ್ನು ಹಾಳುಗೆಡವಿಯಾದರೂ ನಾವು ಬೆಳೆಯೋಣ ಎನ್ನುವ ಸ್ವಾರ್ಥದಲ್ಲಿ ಮುಳಗಿದ ಜನರಿಗೆ ಇದೊಂದು ಪ್ರೇರಣೆಯ ನೀತಿ ಪಾಠವೆನಿಸುವುದು. ಇದು ಮನೆಯ ಅಣ್ಣ ತಮ್ಮಂದಿರಿಂದ ಹಿಡಿದು, ಜೊತೆ ಇರುವ ಸಹಪಾಠಿಗಳವರೆಗೂ, ಸಹೋದ್ಯೋಗಿಗಳವರೆಗೂ ಅನ್ವಯವಾಗಬೇಕಾದ ಪರಮ ಸತ್ಯವಿದು.

ಅದಕ್ಕಾಗಿಯೇ ಹೇಳಿದ್ದು ನಿಯತ್ತನ್ನು, ಜವಾಬ್ದಾರಿಯನ್ನು ಅಗ್ಗದ ಜನರಿಂದ ಅಪೇಕ್ಷಿಸಲು ಸಾಧ್ಯವಿಲ್ಲ.

ಇನ್ನೊಬ್ಬರನ್ನು ಮೇಲೆತ್ತದಿದ್ದರೂ ಸರಿಯೇ, ಇನ್ನೊಬ್ಬರನ್ನು ಕೆಳಗೆ ಬೀಳಿಸುವ ಗುಂಪಿಗೆ ಸೇರದಿರೋಣ..



ಲೇಖನ
■ - ಡಾ. ರಾಜಶೇಖರ ನಾಗೂರ

# ರೈತನ ಮಗಳು ಹೋಮಿಯೋಪತಿ ಡಾಕ್ಟರ್

■ ಉದಯರಶ್ಮಿ ದಿನಪತ್ರಿಕೆ

ಕೆಂಭಾವಿ: ಪಟ್ಟಣದ ಸಮೀಪವಿರುವ ನಗನೂರು ಗ್ರಾಮದ ರೈತ ದಂಪತಿ ಪದ್ಮಾವತಿ ಗಂಡ ಚಂದ್ರಶೇಖರ ಲಕ್ಕುಂಡಿ ಇವರ ಸುಪುತ್ರಿ ಕುಮಾರಿ ಶಿವಲೀಲಾ ಕರ್ನಾಟಕ ರಾಜ್ಯದ ಪ್ರತಿಷ್ಠಿತ ಏಕೈಕ ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಕಾಲೇಜು ಬೆಂಗಳೂರಲ್ಲಿ, 2018–19 ರಿಂದ 2023–24 ರವರೆಗೆ ಬ್ಯಾಚುಲರ್ ಆಫ್ ಹೋಮಿಯೋಪತಿ ವೈದ್ಯಕೀಯ ಶಿಕ್ಷಣ ಪೂರೈಸಿದ ಗ್ರಾಮೀಣ ಪ್ರತಿಭೆ.



ಇತ್ತೀಚೆಗೆ ಚೌಡಯ್ಯ ಮೆಮೋ–ರಿಯಲ್ ಹಾಲ್ ಬೆಂಗಳೂರಲ್ಲಿ, ಹೋಮಿಯೋಪತಿ ರಾಷ್ಟ್ರೀಯ ಆಯೋಗ ನವದೆಹಲಿ, ಹಾಗೂ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನ ವಿಶ್ವವಿದ್ಯಾಲಯ ಬೆಂಗಳೂರು, ಮತ್ತು ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಸಹಯೋಗದಲ್ಲಿ ಜರುಗಿದ 34 ನೇ ಪದವಿ ಪ್ರಧಾನ ಸಮಾರಂಭದಲ್ಲಿ, ಡಾ ಶೈಲೇಂದ್ರ ಜಿ ಬೆಲ್ದಾಳೆ ಶಾಸಕರು ದಕ್ಷಿಣ ಮತಕ್ಷೇತ್ರ ಬೀದರ್. ಡಾ ರಿಯಾಜ್ ಬಾಷ, ಕುಲಸಚಿವರು ಮೌಲ್ಯ ಮಾಪನ ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯ ಬೆಂಗಳೂರು. ಡಾ ಎ ಬಿ ಪಾಟೀಲ್ ನಿವೃತ್ತ ನಿರ್ದೇಶಕರು ಆಯುಷ್ ಇಲಾಖೆ ಬೆಂಗಳೂರು, ಡಾ ವಿ ಗುರುಪ್ರಸಾದ್ ನಿವೃತ್ತ ಪ್ರಾಚಾರ್ಯರು ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಬೆಂಗಳೂರು, ಡಾ ರಾಜೇಶ್ವರಿ ಕೆ ಪ್ರಾಚಾರ್ಯರು ಸರ್ಕಾರಿ ಹೋಮಿಯೋಪತಿ ವೈದ್ಯಕೀಯ ಕಾಲೇಜು ಮತ್ತು ಆಸ್ಪತ್ರೆ ಬೆಂಗಳೂರು ಇವರಿಂದ 'ಡಾಕ್ಟರ್' ಪದವಿ ಪಡೆದರು. ಸೋದರ ಮಾಮ ಡಾ ಯಂಕನಗೌಡ ಪಾಟೀಲ್, ತಾಯಿ ಪದ್ಮಾವತಿ, ತಮ್ಮ ಶಿವಶರಣ, ಗೆಳತಿ ರೇಣುಕಾ, ಸುಂದರ ಕ್ಷಣಗಳಿಗೆ ಸಾಕ್ಷಿಯಾಗಿ ಸಂಭ್ರಮಿಸಿ, ಶುಭಹಾರೈಸಿದರು.

## ‘ಕಾವ್ಯರಶ್ಮಿ’



### ಅನುರಾಗ

■ ಉದಯರಶ್ಮಿ ದಿನಪತ್ರಿಕೆ

ಜೀವಜೀವಗಳು ಬೆಸೆವ ಮಧುರ ಮಿಲನವು
ಹೃದಯವೇ ಸುಮಧುರ ಸುಂದರ ತಾಣವು
ಮಧುರವಾಗಿದೆ ರಸಮಯ ಒಲವಗಾನವು
ಚೆಲುವಿನ ಒಲವಿನ ಸುಂದರವಾದ ಕ್ಷಣವು

ಜೀವಗಳ ಭಾವದಲ್ಲಿದೇ ಸುಮಧುರ ಚೇತನ
ಹೊಸತನದಿ ಹೊಮ್ಮಿ ಬಂದಿದೆ ನಲಿವಮನ
ಅಂತರಂಗವು ಹೇಳ ಬಯಸಿದೆ ಮಧುವನ
ಅದುವೇ ಇಂಪಾದ ಪ್ರೀತಿಯ ಮಧುರಗಾನ

ಚೆಂದದ ಚೆಲುವಿನಲಿ ಮೂಡಿದೆ ಅನುರಾಗ
ಮನಗಳೆರಡು ಬೆರೆತು ತಂದಿದೆ ಶುಭಯೋಗ
ಮನಮನ ಸ್ಪಂದಿಸುತಾ ಹಾಡಿವೆ ಹೊಸರಾಗ
ತೋರಿವೆ ಒಲವಿನ ಸುಂದರ ಪ್ರೇಮಾನುರಾಗ



■ ನಳಿನಾ ದ್ವಾರಕಾನಾಥ್

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR